
Volume : 9 | Issue : 164 | September : 16 : 2026 : Wednesday
ಸಂಪುಟ : 9 | ಸಂಚಿಕೆ : 164 | ಸೆಪ್ಟಂಬರ್ : 16 : 2026 : ಬುಧವಾರ
www.VIKRAMAVAHINI.com
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ



# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||
VIKRAMA VAHINI
PRGI NO: KARKAN/2018/78481



ನಟಿ ರಾಖಿ ಸಾವಂತ್ ವಿರುದ್ಧ ನಟಿ ಹಾಗೂ ಸಂಸದೆ ಕಂಗನಾ ರಣಾವತ್ ಆಕ್ರೋಶ ವ್ಯಕ್ತಪಡಿಸಿದ್ದು, 'ಪೌರಕಾರ್ಮಿಕನ ಕೆಲಸಕ್ಕೂ ಅರ್ಹತೆ ಬೇಕು' ಎಂದು ತಿರುಗೇಟು ನೀಡಿದ್ದಾರೆ.

'ಬಿಜೆಪಿಯವರ ಎದೆ ಸೀಳಿದರೆ ರಾಜ್ಯದ ಹಿತ ಕಾಯುವ ಒಂದೇ ಒಂದು ಅಂಶವಿಲ್ಲ' ಪುಟ 2

"ನಾನು ನಟನೆಯಿಂದ ನಿವೃತ್ತಿ ಹೊಂದುತ್ತಿಲ್ಲ" ಪುಟ 4

## ಸುದ್ದಿ ಚುಟುಕು

### ಬೆಂಗಳೂರಿನಲ್ಲಿ ವರುಣಾರ್ಭಟ: ತಗ್ಗು ಪ್ರದೇಶಗಳಿಗೆ ನುಗ್ಗಿದ ನೀರು

● ವಿಕ್ರಮ ವಾಹಿನಿ । ಬೆಂಗಳೂರು

ಕಳೆದ ಎರಡ್ಮೂರು ದಿನಗಳಿಂದ ಬಿಸಿಲಿನ ತಾಪದಿಂದ ಕಂಗೆಟ್ಟಿದ್ದ ರಾಜಧಾನಿ ಬೆಂಗಳೂರಿಗೆ ಮಂಗಳವಾರ ಸಂಜೆ ವರುಣನ ಆಗಮನವಾಗಿದ್ದು, ನಗರದ ಹಲವು ಭಾಗಗಳಲ್ಲಿ ಸುಮಾರು ಒಂದು ಗಂಟೆಗೂ ಹೆಚ್ಚು ಕಾಲ ಧಾರಾಕಾರ ಮಳೆ ಸುರಿಯಿತು. ಬಿರುಗಾಳಿ ಸಹಿತ ಸುರಿದ ಭಾರಿ ಮಳೆಯಿಂದ ತಗ್ಗು ಪ್ರದೇಶಗಳಿಗೆ ನೀರು ನುಗ್ಗಿ, ರಸ್ತೆಗಳಲ್ಲಿ ನೀರು ನಿಂತ ಪರಿಣಾಮ ಸಂಚಾರ ಅಸ್ತವ್ಯಸ್ತಗೊಂಡಿತು.

ಸಂಜೆ 6 ಗಂಟೆ ಸುಮಾರಿಗೆ ಆರಂಭವಾದ ಮಳೆ 7 ಗಂಟೆಯವರೆಗೂ ಹಲವು ಪ್ರದೇಶಗಳಲ್ಲಿ ಮುಂದುವರಿಯಿತು. ಕಚೇರಿ ಮುಗಿಸಿ ಮನೆಗಳತ್ತ ತೆರಳುತ್ತಿದ್ದ ವಾಹನ ಸವಾರರು ಮಳೆ ಹಾಗೂ ಸಂಚಾರ ದಟ್ಟಣೆಯಿಂದಾಗಿ ಪರದಾಡುವಂತಾಯಿತು.

ಶಾಂತಿನಗರ, ಕಲಾಸಿಪಾಳ್ಯ, ಸಿಟಿ ಮಾರ್ಕೆಟ್, ಜಯನಗರ, ವಿಲ್ಸನ್ ಗಾರ್ಡನ್, ಎಂಜಿ ರಸ್ತೆ, ವಿವೇಕನಗರ, ಕೋರಮಂಗಲ, ಎಚ್‌ಎಸ್‌ಆರ್ ಲೇಔಟ್, ಬೆಳ್ಳಂದೂರು, ವರ್ತೂರು, ಸರ್ಜಾಪುರ, ವೈಟ್‌ಫೀಲ್ಡ್, ಕೆ.ಆರ್.ಪುರಂ ಸೇರಿದಂತೆ ನಗರದ ಹಲವು ಭಾಗಗಳಲ್ಲಿ ಭಾರಿ ಮಳೆಯಾಗಿದೆ. ಕೆಲವೆಡೆ ರಸ್ತೆಗಳು ಜಲಾವೃತಗೊಂಡು ವಾಹನಗಳ ಸಂಚಾರಕ್ಕೆ ತೊಂದರೆಯಾಯಿತು.

**ಕೆಆರ್ ಸರ್ಕಲ್ ಅಂಡರ್‌ಪಾಸ್ ಬಂದ್**

ಭಾರಿ ಮಳೆಯ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ಕೆಆರ್ ಸರ್ಕಲ್ ಅಂಡರ್‌ಪಾಸ್ ಅನ್ನು ಪೊಲೀಸರು ಬಂದ್ ಮಾಡಿದರು. ಸಣ್ಣ ಮಳೆಯಾದರೂ ಅಂಡರ್‌ಪಾಸ್‌ನಲ್ಲಿ ನೀರು ನಿಲ್ಲುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಬ್ಯಾರಿಕೇಡ್ ಅಳವಡಿಸಿ ವಾಹನಗಳ ಸಂಚಾರವನ್ನು ನಿರ್ಬಂಧಿಸಲಾಯಿತು.

ಹಠಾತ್ ಸುರಿದ ಮಳೆಯಿಂದ ನಗರದ ವಿವಿಧೆಡೆ ವಾಹನಗಳ ವೇಗ ಕುಂಠಿತಗೊಂಡಿದ್ದು, ಪ್ರಮುಖ ರಸ್ತೆಗಳಲ್ಲಿ ಸಂಚಾರ ದಟ್ಟಣೆ ಉಂಟಾಯಿತು. ಮಳೆ ನೀರು ಸರಾಗವಾಗಿ ಹರಿದುಹೋಗದ ಪ್ರದೇಶಗಳಲ್ಲಿ ವಾಹನ ಸವಾರರು ಹೆಚ್ಚಿನ ತೊಂದರೆ ಅನುಭವಿಸಿದರು.

### 'ವಂದೇ ಮಾತರಂ' ಮೊಟಕು: ಹೈಕೋರ್ಟ್ ಮೊರೆ



● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯ ಸರ್ಕಾರದ ಅಧಿಕೃತ ಕಾರ್ಯಕ್ರಮಗಳಲ್ಲಿ 'ವಂದೇ ಮಾತರಂ' ಗೀತೆಯ ಮೊದಲ ಎರಡು ಚರಣಗಳನ್ನು ಮಾತ್ರ ಹಾಡುವಂತೆ ಹೊರಡಿಸಿರುವ ಆದೇಶವನ್ನು ಪ್ರಶ್ನಿಸಿ ಹೈಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಲಾಗಿದೆ.

ವಕೀಲ ಗಿರೀಶ ಭಾರದ್ವಾಜ್ ಅವರು ಸೆ.8ರಂದು ಸರ್ಕಾರ ಹೊರಡಿಸಿರುವ ಆದೇಶ ಪ್ರಶ್ನಿಸಿ ಅರ್ಜಿ ಸಲ್ಲಿಸಿದ್ದು, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಹಾಗೂ ಕೇಂದ್ರ ಗೃಹ ಸಚಿವಾಲಯವನ್ನು ಪ್ರತಿವಾದಿಗಳನ್ನಾಗಿ ಮಾಡಲಾಗಿದೆ. ಅರ್ಜಿ ಇನ್ನಷ್ಟೇ ವಿಚಾರಣೆಗೆ ಬರಬೇಕಿದೆ.

ಸೆ.3ರಂದು ಸಚಿವ ಸಂಪುಟ ಕೈಗೊಂಡ ನಿರ್ಣಯ ಹಾಗೂ ಸೆ.8ರ ಆದೇಶವು ಕೇಂದ್ರ ಗೃಹ ಸಚಿವಾಲಯದ ಸೂಚನೆಗಳು ಮತ್ತು ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿದೆ ಎಂದು ಅರ್ಜಿಯಲ್ಲಿ ಆರೋಪಿಸಲಾಗಿದೆ. ಅಲ್ಲದೆ, ಸರ್ಕಾರಿ ನೌಕರರು ಹಾಗೂ ಸಾರ್ವಜನಿಕರ ಮೂಲ ಹಕ್ಕುಗಳಿಗೆ ಧಕ್ಕೆ ಉಂಟಾಗುವ ಸಾಧ್ಯತೆಯಿದೆ ಎಂದು ವಾದಿಸಲಾಗಿದೆ.

ಆದೇಶ ಹಿಂಪಡೆದು ಪೂರ್ಣ 'ವಂದೇ ಮಾತರಂ' ಹಾಡಲು ಅವಕಾಶ ನೀಡುವಂತೆ ಸೆ.14ರಂದು ಸರ್ಕಾರಕ್ಕೆ ಮನವಿ ಸಲ್ಲಿಸಿದ್ದರೂ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಹೀಗಾಗಿ ನ್ಯಾಯಾಲಯದ ಮೊರೆ ಹೋಗಿರುವುದಾಗಿ ಅರ್ಜಿದಾರರು ತಿಳಿಸಿದ್ದಾರೆ.

**ಎರಡು ಚರಣಗಳಿಗೆ ಮಾತ್ರ ಅವಕಾಶ**

ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಮಂತ್ರಿ ಹಾಗೂ ರಾಜ್ಯಪಾಲರು ಭಾಗವಹಿಸುವ ಕಾರ್ಯಕ್ರಮಗಳನ್ನು ಹೊರತುಪಡಿಸಿ, ರಾಜ್ಯ ಸರ್ಕಾರದ ಇತರ ಅಧಿಕೃತ ಕಾರ್ಯಕ್ರಮಗಳಲ್ಲಿ 'ವಂದೇ ಮಾತರಂ'ನ ಮೊದಲ ಎರಡು ಚರಣಗಳನ್ನು ಮಾತ್ರ ಹಾಡುವಂತೆ ಸರ್ಕಾರ ಸೂಚಿಸಿದೆ.
ಈ ಆದೇಶದ ಸಾಂವಿಧಾನಿಕ ಹಾಗೂ ಕಾನೂನುಬದ್ಧ ಮಾನ್ಯತೆಯನ್ನೇ ಅರ್ಜಿಯಲ್ಲಿ ಪ್ರಶ್ನಿಸಲಾಗಿದೆ.

# ಯುಪಿಐ ಪಾವತಿಗೆ ಶುಲ್ಕ: ಸಣ್ಣ ವ್ಯಾಪಾರಿಗಳ ಮೇಲೆ ಹೊರೆ

**ಅ.15ರಿಂದ ರೂ 2,000ಕ್ಕಿಂತ ಹೆಚ್ಚಿನ ಆಯ್ದ ಯುಪಿಐ ವ್ಯಾಪಾರಿ ವಹಿವಾಟುಗಳಿಗೆ ಶೇ.0.4ರಷ್ಟು ಎಂಡಿಆರ್ ಶುಲ್ಕ ಜಾರಿಯಾಗಲಿದ್ದು, ಪ್ರತಿ ವಹಿವಾಟಿಗೆ ಗರಿಷ್ಠ ರೂ 300ಕ್ಕೆ ಮಿತಿ ನಿಗದಿಪಡಿಸಲಾಗಿದೆ. ಸಣ್ಣ ವ್ಯಾಪಾರಿಗಳ ರೂ 2,000ವರೆಗಿನ ವಹಿವಾಟುಗಳಿಗೆ ಶುಲ್ಕವಿಲ್ಲ. ವ್ಯಕ್ತಿಯಿಂದ ವ್ಯಕ್ತಿಗೆ ನಡೆಯುವ ಯುಪಿಐ ಹಣ ವರ್ಗಾವಣೆಯೂ ಈ ಶುಲ್ಕ ವ್ಯಾಪ್ತಿಗೆ ಒಳಪಡುವುದಿಲ್ಲ.**

● ವಿಕ್ರಮ ವಾಹಿನಿ । ನವದೆಹಲಿ

ಯುಪಿಐ ಮೂಲಕ ಹಣ ಪಾವತಿಸುವವರಿಗೆ ಮಹತ್ವದ ಬದಲಾವಣೆಯಾಗಿದ್ದು, ಅಕ್ಟೋಬರ್ 15ರಿಂದ ರೂ 2,000ಕ್ಕೂ ಅಧಿಕ ಮೊತ್ತದ ಆಯ್ದ ವ್ಯಕ್ತಿಯಿಂದ ವ್ಯಾಪಾರಿಗೆ (P2M) ನಡೆಯುವ ಯುಪಿಐ ವಹಿವಾಟುಗಳಿಗೆ ಶೇ.0.4ರಷ್ಟು ಮರ್ಚೆಂಟ್ ಡಿಸ್ಕೌಂಟ್ ರೇಟ್ (ಎಂಡಿಆರ್) ವಿಧಿಸಲಾಗುತ್ತದೆ. ರಾಷ್ಟ್ರೀಯ ಪಾವತಿ ನಿಗಮ (ಎನ್‌ಪಿಸಿಐ) ಪರಿಷ್ಕೃತ ಶುಲ್ಕ ವ್ಯವಸ್ಥೆಯನ್ನು ಪ್ರಕಟಿಸಿದ್ದು, ಪ್ರತಿ ವಹಿವಾಟಿಗೆ ಗರಿಷ್ಠ ರೂ 300ಕ್ಕೆ ಶುಲ್ಕವನ್ನು ಮಿತಿಗೊಳಿಸಲಾಗಿದೆ.

ಈ ಶುಲ್ಕ ವ್ಯಕ್ತಿಯಿಂದ ವ್ಯಕ್ತಿಗೆ (P2P) ನಡೆಯುವ ಯುಪಿಐ ಹಣ ವರ್ಗಾವಣೆಗೆ ಅನ್ವಯಿಸುವುದಿಲ್ಲ. ಅಂದರೆ ಸ್ನೇಹಿತರು, ಕುಟುಂಬ ಸದಸ್ಯರು ಅಥವಾ ಇತರ ವ್ಯಕ್ತಿಗಳಿಗೆ ನೇರವಾಗಿ ಮಾಡುವ ಯುಪಿಐ ಪಾವತಿಗಳು ಎಂದಿನಂತೆ ಶುಲ್ಕಮುಕ್ತವಾಗಿರಲಿವೆ. ಹೊಸ ವ್ಯವಸ್ಥೆ ಆಯ್ದ ವ್ಯಾಪಾರಿ ವಹಿವಾಟುಗಳಿಗೆ ಮಾತ್ರ ಅನ್ವಯಿಸಲಿದೆ.




**ಗ್ರಾಹಕರಿಗೆ ನೇರ ಶುಲ್ಕವಿಲ್ಲ:** ಎಂಡಿಆರ್ ಶುಲ್ಕವನ್ನು ಸಾಮಾನ್ಯವಾಗಿ ವ್ಯಾಪಾರಿಯಿಂದ ಭರಿಸಲಾಗುತ್ತದೆ. ಗ್ರಾಹಕರಿಂದ ಪ್ರತ್ಯೇಕವಾಗಿ ಯುಪಿಐ ಶುಲ್ಕ ವಸೂಲಿ ಮಾಡುವ ವ್ಯವಸ್ಥೆ ಇದಲ್ಲ. ಹೀಗಾಗಿ ರೂ 2,000ಕ್ಕೂ ಅಧಿಕ ಮೊತ್ತವನ್ನು ಅಂಗಡಿ, ಸಂಸ್ಥೆ ಅಥವಾ ಸೇವಾ ಪೂರೈಕೆದಾರರಿಗೆ ಯುಪಿಐ ಮೂಲಕ ಪಾವತಿಸುವ ಗ್ರಾಹಕರ ಖಾತೆಯಿಂದ ಹೆಚ್ಚುವರಿ ಶುಲ್ಕ ನೇರವಾಗಿ ಕಡಿತವಾಗುವುದಿಲ್ಲ.

**ರೂ 75 ಸಾವಿರ ಮೇಲ್ಪಟ್ಟರೂ ಗರಿಷ್ಠ ರೂ 300:** ಸಾಮಾನ್ಯ ವ್ಯಾಪಾರಿ ವಹಿವಾಟುಗಳಲ್ಲಿ ರೂ 2,000 ಮೀರಿದ ಮೊತ್ತಕ್ಕೆ ಶೇ.0.4ರಷ್ಟು ಎಂಡಿಆರ್ ಅನ್ವಯವಾಗಲಿದೆ. ಆದರೆ ಈ ಶುಲ್ಕ ಪ್ರತಿ ವಹಿವಾಟಿಗೆ ಗರಿಷ್ಠ ರೂ 300ಕ್ಕೆ ಸೀಮಿತವಾಗಿರುತ್ತದೆ. ಹೀಗಾಗಿ ರೂ 75,000 ಅಥವಾ ಅದಕ್ಕಿಂತ ಹೆಚ್ಚಿನ ಮೊತ್ತದ ವಹಿವಾಟಿಗೂ ಗರಿಷ್ಠ ರೂ 300 ಮಾತ್ರ ಎಂಡಿಆರ್ ವಿಧಿಸಲಾಗುತ್ತದೆ.

**ರೈಲ್ವೆ, ಇಂಧನ ಸೇರಿ ಕೆಲವು ಕ್ಷೇತ್ರಗಳಿಗೆ ರೂ 5:** ರೈಲ್ವೆ, ದೂರಸಂಪರ್ಕ, ವಿಮೆ ಮತ್ತು ಇಂಧನದಂತಹ ಆಯ್ದ ಅಗತ್ಯ ಸೇವೆಗಳ ವಹಿವಾಟುಗಳಿಗೆ ಪ್ರತ್ಯೇಕ ದರ ನಿಗದಿಪಡಿಸಲಾಗಿದೆ. ಈ ವಿಭಾಗಗಳಲ್ಲಿ ರೂ 2,000ಕ್ಕೂ ಅಧಿಕ ಯುಪಿಐ ಪಾವತಿಗಳಿಗೆ ಪ್ರತಿ ವಹಿವಾಟಿಗೆ ರೂ 5ರಷ್ಟು ಸ್ಥಿರ ಎಂಡಿಆರ್ ಅನ್ವಯವಾಗಲಿದೆ.

**ಸಣ್ಣ ವಹಿವಾಟುಗಳಿಗೆ ವಿನಾಯಿತಿ:** ರೂ 2,000ವರೆಗಿನ ಯುಪಿಐ ವಹಿವಾಟುಗಳಿಗೆ ಶುಲ್ಕ ವಿಧಿಸದಿರುವ ವ್ಯವಸ್ಥೆ ಮುಂದುವರಿಯಲಿದೆ. ಸರ್ಕಾರದ ಸೆ.14ರ ಅಧಿಸೂಚನೆಯಂತೆ, ರೂ 2,000ವರೆಗಿನ ಯುಪಿಐ ಮತ್ತು ರುಪೇ ಡೆಬಿಟ್ ಕಾರ್ಡ್ ವಹಿವಾಟುಗಳಿಗೆ ಯಾವುದೇ ನೇರ ಅಥವಾ ಪರೋಕ್ಷ ಶುಲ್ಕ ವಿಧಿಸುವಂತಿಲ್ಲ.

ಯುಪಿಐ ವಹಿವಾಟುಗಳ ಪ್ರಮಾಣ ಭಾರಿ ಪ್ರಮಾಣದಲ್ಲಿ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಡಿಜಿಟಲ್ ಪಾವತಿ ವ್ಯವಸ್ಥೆಯ ಮೂಲಸೌಕರ್ಯ, ಸೈಬರ್ ಭದ್ರತೆ, ವಂಚನೆ ತಡೆ ಹಾಗೂ ತಾಂತ್ರಿಕ ವ್ಯವಸ್ಥೆಗಳನ್ನು ಮತ್ತಷ್ಟು ಬಲಪಡಿಸಲು ಅಗತ್ಯವಿರುವ ವೆಚ್ಚವನ್ನು ನಿರ್ವಹಿಸುವ ಉದ್ದೇಶದಿಂದ ಹೊಸ ಎಂಡಿಆರ್ ವ್ಯವಸ್ಥೆ ಜಾರಿಗೆ ಬರುತ್ತಿದೆ. ಆಗಸ್ಟ್‌ನಲ್ಲಿ ಮಾತ್ರ ದೇಶದಲ್ಲಿ ಸುಮಾರು 24 ಬಿಲಿಯನ್ ಯುಪಿಐ ವಹಿವಾಟುಗಳು ನಡೆದಿದ್ದು, ಡಿಜಿಟಲ್ ಪಾವತಿ ವ್ಯವಸ್ಥೆಯ ವ್ಯಾಪ್ತಿ ಎಷ್ಟರ ಮಟ್ಟಿಗೆ ವಿಸ್ತರಿಸಿದೆ ಎಂಬುದನ್ನು ಇದು ತೋರಿಸುತ್ತದೆ.

# ಸ್ವಪಕ್ಷೀಯರ ವಿರುದ್ಧ ಮತ್ತೆ ರಾಜಣ್ಣ ಗುಡುಗು

● ವಿಕ್ರಮ ವಾಹಿನಿ । ಬೆಂಗಳೂರು

ಅಧಿಕಾರ ಎಂಬುದು ವಿಷವಿದ್ದಂತೆ. ಗಿಡದ ಸುತ್ತ ಕಳೆ ಬೆಳೆದಂತೆ ಅಧಿಕಾರದ ಸುತ್ತಲೂ ಹಲವು ಬೆಳವಣಿಗೆಗಳು ನಡೆಯುತ್ತವೆ ಎಂದು ಮಾಜಿ ಸಚಿವ ಕೆ.ಎನ್. ರಾಜಣ್ಣ ಅವರು ಸ್ವಪಕ್ಷೀಯರ ವಿರುದ್ಧ ಪರೋಕ್ಷವಾಗಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರನ್ನು ಸದಾಶಿವನಗರದ ನಿವಾಸದಲ್ಲಿ ಭೇಟಿಯಾಗಿ ಮಾತುಕತೆ ನಡೆಸಿದ ರಾಜಣ್ಣ, ಬಳಿಕ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರ ನಿವಾಸಕ್ಕೆ ತೆರಳಿ ಅರ್ಧ ಗಂಟೆಗೂ ಹೆಚ್ಚು ಕಾಲ ರಾಜಕೀಯ ಬೆಳವಣಿಗೆಗಳ ಕುರಿತು ಚರ್ಚಿಸಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಪೆಕ್ಸ್ ಬ್ಯಾಂಕ್‌ನಲ್ಲಿ ರೈತರ ಹಿತಕ್ಕಾಗಿ ಸರ್ಕಾರದ ಸಹಕಾರ ಅಗತ್ಯವಿದೆ.

ಸರ್ಕಾರದ ಪರ ಇರುವವರು ಅಧ್ಯಕ್ಷ ಸ್ಥಾನದಲ್ಲಿದ್ದರೆ ಅನುಕೂಲವಾಗಲಿದೆ ಎಂಬ ಕಾರಣಕ್ಕೆ ತಾವು ಸ್ಪರ್ಧೆಯಿಂದ ಹಿಂದೆ ಸರಿದಿರುವುದಾಗಿ ತಿಳಿಸಿದರು.


ಇನ್ನು ಎರಡೂವರೆ ವರ್ಷಗಳ ಬಳಿಕವೂ ಅಪೆಕ್ಸ್ ಬ್ಯಾಂಕ್ ಅಧ್ಯಕ್ಷ ಸ್ಥಾನದ ಆಕಾಂಕ್ಷಿಯಾಗಿಲ್ಲ. ಸ್ಪರ್ಧಿಸುವ ಉದ್ದೇಶವೂ ಇಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಸರ್ಕಾರದ ನೂರು ದಿನಗಳ ಸಂಭ್ರಮಾಚರಣೆಗೆ ಬಿ.ಕೆ. ಹರಿಪ್ರಸಾದ್ ಅವರನ್ನು ಆಹ್ವಾನಿಸಬೇಕಿತ್ತು. ಡಿ.ಕೆ. ಶಿವಕುಮಾರ್ ಅವರು ಕೆಪಿಸಿಸಿ ಅಧ್ಯಕ್ಷರಾಗಿದ್ದಾಗ ಇಂತಹ ಬೆಳವಣಿಗೆ ನಡೆಯುತ್ತಿತ್ತೇ? ಸಿದ್ದರಾಮಯ್ಯ ಅವರೇ ಕರೆದು ಮಾತನಾಡಬೇಕಿತ್ತು. ರಾಜ್ಯದಲ್ಲಿನ ಬೆಳವಣಿಗೆಗಳನ್ನು ಎಐಸಿಸಿ ಗಮನಕ್ಕೆ ತರಬೇಕಾಗುತ್ತದೆ. ಕಾಲಕ್ರಮೇಣ ಎಲ್ಲವೂ ಸರಿಯಾಗಲಿದೆ ಎಂದರು.

ಇತ್ತೀಚೆಗೆ ಸತೀಶ್ ಜಾರಕಿಹೊಳಿ ಅವರ ಮೇಲಿನ ಜಾರಿ ನಿರ್ದೇಶನಾಲಯದ ದಾಳಿ ವಿಚಾರದಲ್ಲಿಯೂ ರಾಜಣ್ಣ ಅವರು ಪಕ್ಷದ ನಾಯಕರ ವಿರುದ್ಧ ಪರೋಕ್ಷವಾಗಿ ಅಸಮಾಧಾನ ವ್ಯಕ್ತಪಡಿಸಿದ್ದರು. ಇದೀಗ ಮತ್ತೆ ಸ್ವಪಕ್ಷೀಯರ ವಿರುದ್ಧವೇ ಬಹಿರಂಗವಾಗಿ ಹೇಳಿಕೆ ನೀಡಿರುವುದು ಕಾಂಗ್ರೆಸ್‌ನಲ್ಲಿ ಚರ್ಚೆಗೆ ಕಾರಣವಾಗಿದೆ.

### ಸ್ಪರ್ಧಿಸಿದ್ದರೆ ಗೆಲ್ಲುತ್ತಿದ್ದೆ

**ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ್ದರೆ ತಾನೇ ಗೆಲ್ಲುತ್ತಿದ್ದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಪರವಾಗಿಯೇ ಇದ್ದರು. ಆದರೆ ಈ ವಿಚಾರದಲ್ಲಿ ಅವರ ಮಾತು ನಡೆದಿಲ್ಲ. ರಾಜ್ಯ ನಾಯಕರು ಅಥವಾ ಎಐಸಿಸಿ ಮಟ್ಟದಲ್ಲಿ ಎಲ್ಲಿ ಹಿನ್ನಡೆಯಾಯಿತು ಎಂಬುದು ಗೊತ್ತಿಲ್ಲ ಎಂದು ರಾಜಣ್ಣ ಹೇಳಿದರು.**



### ಮುಡಾ ದೂರು ವಿಚಾರದಲ್ಲಿ ಸ್ವಪಕ್ಷೀಯರ ವಿರುದ್ಧ ಕಿಡಿ

**ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರ ಹೇಳಿಕೆಯನ್ನು ಸಂಪೂರ್ಣವಾಗಿ ನಂಬುತ್ತೇನೆ ಎಂದ ರಾಜಣ್ಣ, ಮುಡಾ ವಿಚಾರದಲ್ಲಿ ದೂರು ನೀಡಿದ್ದು ಕಾಂಗ್ರೆಸ್‌ನವರೇ ಅಲ್ಲವೇ ಎಂದು ಪ್ರಶ್ನಿಸಿದರು. ಕೃಷ್ಣ ಎಂಬ ವ್ಯಕ್ತಿ ತಾನಾಗಿಯೇ ಸುಪ್ರೀಂ ಕೋರ್ಟ್‌ವರೆಗೆ ಹೋಗಲು ಸಾಧ್ಯವೇ? ಪ್ರಬಲರ ಬೆಂಬಲವಿಲ್ಲದೆ ಇದು ಸಾಧ್ಯವಿಲ್ಲ. ಈ ವಿಚಾರದಲ್ಲಿ ಪಕ್ಷದೊಳಗಿನವರ ಪಾತ್ರದ ಬಗ್ಗೆಯೂ ಪ್ರಶ್ನೆಗಳು ಮೂಡುತ್ತವೆ ಎಂದು ಅವರು ಪರೋಕ್ಷವಾಗಿ ಅಸಮಾಧಾನ ವ್ಯಕ್ತಪಡಿಸಿದರು.**

# ಸಿದ್ದರಾಮಯ್ಯ ಮನೆ ಗೃಹಪ್ರವೇಶ: ಗೋ ಪೂಜೆ



● ವಿಕ್ರಮ ವಾಹಿನಿ । ಮೈಸೂರು

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರಿನಲ್ಲಿ ನಿರ್ಮಿಸಿರುವ ನೂತನ ಮನೆಯ ಗೃಹಪ್ರವೇಶವನ್ನು ಗಣೇಶ ಚತುರ್ಥಿಯ ಶುಭ ಸಂದರ್ಭದಲ್ಲಿ ಸೋಮವಾರ ಕುಟುಂಬಸ್ಥರ ಸಮ್ಮುಖದಲ್ಲಿ ಸರಳವಾಗಿ ನೆರವೇರಿಸಿದರು. ಗೃಹಪ್ರವೇಶದ ಅಂಗವಾಗಿ ಗಣಹೋಮ ಸೇರಿದಂತೆ ವಿವಿಧ ಪೂಜಾ ಕಾರ್ಯಕ್ರಮಗಳನ್ನು ನಡೆಸಲಾಯಿತು.

ಮೈಸೂರಿನ ಕುವೆಂಪುನಗರದಲ್ಲಿ 80ಥ120 ಅಡಿ ನಿವೇಶನದಲ್ಲಿ ನಿರ್ಮಿಸಿರುವ ಎರಡು ಅಂತಸ್ತಿನ ನೂತನ ಬಂಗಲೆಯಲ್ಲಿ ಕುಟುಂಬಸ್ಥರೊಂದಿಗೆ ಸಿದ್ದರಾಮಯ್ಯ ಅವರು ಪೂಜಾ ಕೈಂಕರ್ಯಗಳಲ್ಲಿ ಭಾಗವಹಿಸಿದರು. ಸಂಪ್ರದಾಯದಂತೆ ಮನೆಯ ಗೃಹಪ್ರವೇಶದ ವೇಳೆ ಹಸು ಹಾಗೂ ಕರುವನ್ನು ಮನೆಗೆ ಕರೆತಂದು ಗೋ ಪೂಜೆ ನೆರವೇರಿಸಲಾಯಿತು.

ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಅವರು ಗೋ ಪೂಜೆ ನೆರವೇರಿಸಿದರೆ, ಪುತ್ರ ಹಾಗೂ ಮಾಜಿ ಶಾಸಕ ಡಾ. ಯತೀಂದ್ರ ಸಿದ್ದರಾಮಯ್ಯ ಅವರು ಲಕ್ಷ್ಮಿದೇವಿಯ ಫೋಟೋ ಹಿಡಿದು ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿರುವುದು ಗಮನ ಸೆಳೆಯಿತು. ಈ ಸಂದರ್ಭದ ಫೋಟೊಗಳು ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡುತ್ತಿದ್ದು, ವ್ಯಾಪಕ ಚರ್ಚೆಗೆ ಕಾರಣವಾಗಿವೆ.

ಸಿದ್ದರಾಮಯ್ಯ ಅವರು ಸಮಾಜವಾದಿ ಚಿಂತನೆಯ ನಾಯಕರಾಗಿ ಗುರುತಿಸಿಕೊಂಡಿದ್ದು, ತಮ್ಮ ರಾಜಕೀಯ ಜೀವನದಲ್ಲಿ ಧಾರ್ಮಿಕ ಆಚರಣೆಗಳಿಂದ ಅಂತರ ಕಾಯ್ದುಕೊಂಡಿದ್ದವರು ಎಂಬ ಅಭಿಪ್ರಾಯವೂ ಇದೆ. ಈ ಹಿನ್ನೆಲೆಯಲ್ಲಿ ನೂತನ ಮನೆ ಗೃಹಪ್ರವೇಶದ ವೇಳೆ ನಡೆದ ಗೋ ಪೂಜೆ, ಗಣಹೋಮ ಸೇರಿದಂತೆ ಧಾರ್ಮಿಕ ಕಾರ್ಯಕ್ರಮಗಳು ಇದೀಗ ರಾಜಕೀಯ ವಲಯದಲ್ಲೂ ಚರ್ಚೆಗೆ ಗ್ರಾಸವಾಗಿವೆ.

ಯಾವುದೇ ಅಧಿಕೃತ ಪ್ರವಾಸ ಕಾರ್ಯಕ್ರಮವಿಲ್ಲದೆ ಮೈಸೂರಿಗೆ ಆಗಮಿಸಿದ್ದ ಸಿದ್ದರಾಮಯ್ಯ ಹಾಗೂ ಯತೀಂದ್ರ ಅವರು ಕುಟುಂಬಸ್ಥರೊಂದಿಗೆ ಗೃಹಪ್ರವೇಶದ ಪೂಜಾ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡರು. ಕುಟುಂಬದ ಆಪ್ತರ ಸಮ್ಮುಖದಲ್ಲಿ ಕಾರ್ಯಕ್ರಮ ಸರಳವಾಗಿ ನೆರವೇರಿತು.

# ಕೈ ಕೊಟ್ಟ ಪಾಕ್: ಕೈ ಹಿಡಿದ ಇಸ್ರೇಲ್

● ವಿಕ್ರಮ ವಾಹಿನಿ । ರಿಯಾದ್

ಯೆಮೆನ್‌ನ ಹೌತಿ ಬಂಡುಕೋರರ ನಿರಂತರ ಕ್ಷಿಪಣಿ ಹಾಗೂ ಡ್ರೋನ್ ದಾಳಿಗಳು ಸೌದಿ ಅರೇಬಿಯಾಗೆ ತೀವ್ರ ಭದ್ರತಾ ಸವಾಲಾಗಿ ಪರಿಣಮಿಸಿವೆ. ಪ್ರಮುಖ ಇಂಧನ ಮೂಲಸೌಕರ್ಯಗಳ ಮೇಲೆ ದಾಳಿಯ ಭೀತಿ ಹೆಚ್ಚಿರುವ ಹಿನ್ನೆಲೆಯಲ್ಲಿ ಸೌದಿ ಅರೇಬಿಯಾ ಪರ್ಯಾಯ ಭದ್ರತಾ ನೆರವಿನತ್ತ ಮುಖ ಮಾಡಿದೆ ಎನ್ನಲಾಗಿದೆ.

ಕೆಂಪು ಸಮುದ್ರದ ಕರಾವಳಿ ಹಾಗೂ ಬಾಬ್ ಅಲ್–ಮಂಡೇಬ್ ಜಲಸಂಧಿ ಪ್ರದೇಶದಲ್ಲಿ ಹೌತಿ ಬಂಡುಕೋರರ ಚಟುವಟಿಕೆಗಳು ಹೆಚ್ಚಿರುವುದು ಸೌದಿಯ ತೈಲ ರಫ್ತು ಮತ್ತು ಸಾಗರ ಮಾರ್ಗಗಳ ಮೇಲೆ ಆತಂಕ ಮೂಡಿಸಿದೆ. ಈ ಮಾರ್ಗ ಜಾಗತಿಕ ಇಂಧನ ಸಾಗಣೆಗೆ ಅತ್ಯಂತ ಪ್ರಮುಖವಾಗಿರುವುದರಿಂದ ದೀರ್ಘಕಾಲದ ಅಶಾಂತಿ ಉಂಟಾದರೆ ಅಂತಾರಾಷ್ಟ್ರೀಯ ತೈಲ ಮಾರುಕಟ್ಟೆಯ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ.

ಹೌತಿಗಳು ಸೌದಿ ಗುರಿಗಳತ್ತ ಕ್ಷಿಪಣಿ ಹಾಗೂ ಡ್ರೋನ್‌ಗಳನ್ನು ಬಳಸಿಕೊಂಡು ದಾಳಿ ನಡೆಸುತ್ತಿರುವ ಹಿನ್ನೆಲೆಯಲ್ಲಿ ಸೌದಿ ಭದ್ರತಾ ವ್ಯವಸ್ಥೆ ಕಟ್ಟೆಚ್ಚರದಲ್ಲಿದೆ. ಇಂಧನ ಘಟಕಗಳು ಸೇರಿದಂತೆ ಪ್ರಮುಖ ಮೂಲಸೌಕರ್ಯಗಳ ರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ.



ಈ ನಡುವೆ ಸೌದಿಗೆ ನೆರವು ನೀಡುವ ನಿರೀಕ್ಷೆಯಲ್ಲಿದ್ದ ಪಾಕಿಸ್ತಾನ, ವಿದೇಶಿ ನೆಲದಲ್ಲಿ ನಡೆಯುವ ಸಂಘರ್ಷದಲ್ಲಿ ನೇರವಾಗಿ ಸೈನಿಕವಾಗಿ ಭಾಗವಹಿಸುವುದಿಲ್ಲ ಎಂಬ ನಿಲುವು ವ್ಯಕ್ತಪಡಿಸಿದೆ ಎನ್ನಲಾಗಿದೆ. ಇದರಿಂದ ಸೌದಿಗೆ ರಾಜತಾಂತ್ರಿಕ ಹಾಗೂ ಭದ್ರತಾ ಮಟ್ಟದಲ್ಲಿ ಹೊಸ ಸವಾಲು ಎದುರಾಗಿದೆ. ಕೆಂಪು ಸಮುದ್ರದ ಸಾಗರ ಮಾರ್ಗದ ಭದ್ರತೆ, ಸೌದಿಯ ತೈಲ ರಫ್ತು ಹಾಗೂ ಪ್ರಾದೇಶಿಕ ಶಕ್ತಿಗಳ ನಡುವಿನ ಬದಲಾದ ಸಮೀಕರಣಗಳು ಮುಂದಿನ ದಿನಗಳಲ್ಲಿ ಮಧ್ಯಪ್ರಾಚ್ಯದ ರಾಜಕೀಯದಲ್ಲಿ ಮಹತ್ವದ ಪರಿಣಾಮ ಬೀರುವ ಸಾಧ್ಯತೆ ಇದೆ.

# ಮಳೆಗೆ ಗೋಡೆ ಕುಸಿತ; ಐದು ಜಾನುವಾರುಗಳ ಸಾವು

● ವಿಕ್ರಮ ವಾಹಿನಿ । ಬೆಂಗಳೂರು

ನಗರದಲ್ಲಿ ಮಂಗಳವಾರ ಸಂಜೆ ಸುರಿದ ಭಾರಿ ಮಳೆಯಿಂದ ದೊಮ್ಮಲೂರಿನಲ್ಲಿ ಕಾಂಪೌಂಡ್ ಗೋಡೆ ಕುಸಿದು ನಾಲ್ಕು ಹಸುಗಳು ಹಾಗೂ ಒಂದು ಕರು ಮೃತಪಟ್ಟ ಘಟನೆ ನಡೆದಿದೆ.

ಮುನಿರಾಜು ಅವರಿಗೆ ಸೇರಿದ ಕೊಟ್ಟಿಗೆಯಲ್ಲಿ ಒಟ್ಟು ಎಂಟು ಹಸು ಮತ್ತು ಕರುಗಳನ್ನು ಕಟ್ಟಲಾಗಿತ್ತು. ನಿರಂತರ ಮಳೆಯಿಂದಾಗಿ ಸಮೀಪದ ಗೋಡೆ ಕುಸಿದು ಬಿದ್ದ ಪರಿಣಾಮ ಐದು ಜಾನುವಾರುಗಳು ಸ್ಥಳದಲ್ಲೇ ಸಾವನ್ನಪ್ಪಿವೆ.

ಘಟನೆಯಿಂದ ಪ್ರದೇಶದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ಸ್ಥಳೀಯರು ತಕ್ಷಣ ರಕ್ಷಣಾ ಕಾರ್ಯಕ್ಕೆ ಮುಂದಾದರು. ಮಳೆ ಅವಾಂತರದಿಂದ ಉಂಟಾದ ಈ ದುರಂತಕ್ಕೆ ಸ್ಥಳೀಯರು ವಿಷಾದ ವ್ಯಕ್ತಪಡಿಸಿದ್ದಾರೆ.

ಘಟನಾ ಸ್ಥಳಕ್ಕೆ ಸ್ಥಳೀಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮಳೆಯಿಂದ ದುರ್ಬಲಗೊಂಡಿರುವ ಗೋಡೆ ಹಾಗೂ ಕಟ್ಟಡಗಳ ಬಗ್ಗೆ ಮುನ್ನೆಚ್ಚರಿಕೆ ವಹಿಸುವಂತೆ ಸ್ಥಳೀಯರಿಗೆ ಸೂಚಿಸಲಾಗಿದೆ.

ನಗರದಲ್ಲಿ ಸಂಜೆ ಸುರಿದ ಭಾರಿ ಮಳೆಯಿಂದ ಹಲವೆಡೆ ರಸ್ತೆಗಳಲ್ಲಿ ನೀರು ನಿಂತು ಸಂಚಾರ ದಟ್ಟಣೆ ಉಂಟಾಗಿದ್ದು, ಮಳೆ ಸಂಬಂಧಿತ ಅವಾಂತರಗಳು ವರದಿಯಾಗಿವೆ.

# "ನಕಲಿ ಔಷಧ ಜಾಲ ವಿರುದ್ಧ ಕಠಿಣ ಕ್ರಿಮಿನಲ್ ಕ್ರಮ"

● ವಿಕ್ರಮ ವಾಹಿನಿ । ಮಂಗಳೂರು


ನಕಲಿ ಲೇಬಲ್ ಅಂಟಿಸಿ ಔಷಧಗಳನ್ನು ಮಾರಾಟ ಮಾಡುವ ಜಾಲ ಜನರ ಜೀವದೊಂದಿಗೆ ಚೆಲ್ಲಾಟವಾಡುತ್ತಿದ್ದು, ಇಂತಹ ಕೃತ್ಯವನ್ನು ಕೊಲೆ ಅಥವಾ ಕೊಲೆಯತ್ನಕ್ಕೆ ಸಮಾನವೆಂದು ಪರಿಗಣಿಸಿ ಕಠಿಣ ಕ್ರಿಮಿನಲ್ ಪ್ರಕರಣ ದಾಖಲಿಸಲು ಕಾನೂನು ತಿದ್ದುಪಡಿ ತರಬೇಕು ಎಂದು ರಾಜ್ಯ ಆರೋಗ್ಯ ಸಚಿವ ಯು.ಟಿ. ಖಾದರ್ ಆಗ್ರಹಿಸಿದ್ದಾರೆ.

ಮಂಗಳವಾರ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಸ್ತುತ ನಿಯಮಗಳಡಿ ನಕಲಿ ಔಷಧ ಮಾರಾಟಗಾರರ ಪರವಾನಗಿ ರದ್ದುಪಡಿಸುವುದು, ದಂಡ ಅಥವಾ ಸಾಮಾನ್ಯ ಶಿಕ್ಷೆ ವಿಧಿಸುವ ಅವಕಾಶವಿದೆ. ಆದರೆ ಕೋಟ್ಯಂತರ ರೂಪಾಯಿ ವಹಿವಾಟು ನಡೆಸುವ ಮಾಫಿಯಾಗೆ ಇಂತಹ ದಂಡಗಳು ಪರಿಣಾಮಕಾರಿಯಾಗುವುದಿಲ್ಲ. ಒಂದು ರಾಜ್ಯದಲ್ಲಿ ಪರವಾನಗಿ ರದ್ದಾದ ಬಳಿಕ ಬೇರೆ ರಾಜ್ಯಕ್ಕೆ ತೆರಳಿ ಕುಟುಂಬದ ಸದಸ್ಯರ ಹೆಸರಿನಲ್ಲಿ ಮತ್ತೆ ದಂಧೆ ನಡೆಸುವ ಸಾಧ್ಯತೆಯಿದೆ ಎಂದು ಹೇಳಿದರು.

ಜನಸಾಮಾನ್ಯರ ಆರೋಗ್ಯದ ಜೊತೆ ಆಟವಾಡುವ ಇಂತಹ ಜಾಲದ ವಿರುದ್ಧ ನೇರವಾಗಿ ಕಠಿಣ ಕ್ರಿಮಿನಲ್ ಕ್ರಮ ಕೈಗೊಳ್ಳಲು ಕೇಂದ್ರ ಸರ್ಕಾರ ಕಾನೂನು ರೂಪಿಸಬೇಕು ಎಂದು ಕೇಂದ್ರ ಆರೋಗ್ಯ ಸಚಿವರಿಗೆ ಪತ್ರ ಬರೆದಿರುವುದಾಗಿ ತಿಳಿಸಿದರು.

ಹೊರರಾಜ್ಯಗಳಿಂದ ನಕಲಿ ಔಷಧಗಳು ರಾಜ್ಯಕ್ಕೆ ಬರುತ್ತಿರುವ ಹಿನ್ನೆಲೆಯಲ್ಲಿ ಕೇಂದ್ರ ಔಷಧ ಸುರಕ್ಷತಾ ಅಧಿಕಾರಿಗಳ ವಿಶೇಷ ತಂಡವನ್ನು ನಿಯೋಜಿಸಿ ಅಂತಾರಾಜ್ಯ ಜಾಲದ ವಿರುದ್ಧ ಕ್ರಮ ಕೈಗೊಳ್ಳುವಂತೆಯೂ ಮನವಿ ಮಾಡಲಾಗಿದೆ ಎಂದರು.

**5 ಕೋಟಿಗೂ ಅಧಿಕ ಮೌಲ್ಯದ ಔಷಧ ಜಪ್ತಿ:**



ಕರ್ನಾಟಕದಲ್ಲಿ ಇದೇ ಮೊದಲ ಬಾರಿಗೆ ಬೃಹತ್ ನಕಲಿ ಔಷಧ ಜಾಲ ಪತ್ತೆಹಚ್ಚಲಾಗಿದೆ ಎಂದು ಖಾದರ್ ಹೇಳಿದರು. ರಾಮನಗರ ಸೇರಿದಂತೆ ವಿವಿಧೆಡೆ 5 ಕೋಟಿಗೂ ಅಧಿಕ ಮೌಲ್ಯದ ನಕಲಿ ಹಾಗೂ ಮಿಸ್‌ಲೇಬಲ್ ಔಷಧ ದಾಸ್ತಾನು ಜಪ್ತಿ ಮಾಡಲಾಗಿದೆ.

ಪ್ರಕರಣದ ತನಿಖೆಗೆ ಪೊಲೀಸ್, ಗೃಹ, ಔಷಧ ನಿಯಂತ್ರಣ ಹಾಗೂ ವಾಣಿಜ್ಯ ತೆರಿಗೆ ಇಲಾಖೆಯ ಅಧಿಕಾರಿಗಳನ್ನು ಒಳಗೊಂಡ ಎಸ್‌ಐಟಿ ರಚಿಸಲಾಗಿದೆ.

ನಕಲಿ ವೋಚರ್ ಹಾಗೂ ಬಿಲ್ಲಿಂಗ್‌ನ ಮೂಲ ಪತ್ತೆಹಚ್ಚಲಾಗುತ್ತಿದ್ದು, ಬಿಲ್ಲಿಂಗ್‌ಗೆ ಬಳಸುತ್ತಿದ್ದ ವೆಬ್‌ಸೈಟ್‌ನ್ನು ಬ್ಲಾಕ್ ಮಾಡಲಾಗಿದೆ. ಅನುಮಾನಾಸ್ಪದ ಬ್ಯಾಚ್‌ನ ಔಷಧಗಳನ್ನು ಆಸ್ಪತ್ರೆ ಹಾಗೂ ಔಷಧ ಮಳಿಗೆಗಳಿಂದ ಸಂಪೂರ್ಣವಾಗಿ ವಾಪಸ್ ಪಡೆಯಲು ಆದೇಶಿಸಲಾಗಿದೆ ಎಂದು ತಿಳಿಸಿದರು.

**ಅತ್ಯಾಧುನಿಕ ಪ್ರಯೋಗಾಲಯ ಸ್ಥಾಪನೆ:** ಔಷಧಗಳ ಗುಣಮಟ್ಟವನ್ನು ತ್ವರಿತವಾಗಿ ಪರೀಕ್ಷಿಸಲು ರಾಜ್ಯದಲ್ಲೇ ಅತ್ಯಾಧುನಿಕ ಪ್ರಯೋಗಾಲಯ ಸ್ಥಾಪಿಸುವ ಅಥವಾ ಖಾಸಗಿ ಸುಸಜ್ಜಿತ ಪ್ರಯೋಗಾಲಯಗಳೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಕುರಿತು ಚರ್ಚೆ ನಡೆಯುತ್ತಿದೆ.

ಔಷಧ ನಿಯಂತ್ರಣಾಧಿಕಾರಿಗಳು ಕಾರ್ಖಾನೆ, ಆಸ್ಪತ್ರೆ ಹಾಗೂ ಔಷಧ ಮಳಿಗೆಗಳಿಗೆ ದಿಢೀರ್ ಭೇಟಿ ನೀಡಿ ಯಾದೃಚ್ಛಿಕವಾಗಿ ಮಾದರಿ ಸಂಗ್ರಹಿಸಿ ಪರೀಕ್ಷೆಗೆ ಕಳುಹಿಸುವ ವ್ಯವಸ್ಥೆ ಜಾರಿಗೆ ತರಲಾಗುವುದು ಎಂದರು. 2ನೇ ಪುಟಕ್ಕೆ...

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

### ಸವಿ ವಾಹಿನಿ

ಯೋಚನೆ ಸಾವಿರಾರು ಇದ್ದರೇನು ಗುರಿ ಒಂದೇ ಇರಲಿ, ಸುಖ ದುಃಖ ಏನೇ ಇರಲಿ ಮುಖದಲ್ಲಿ ಸದಾ ನಗು ತುಂಬಿರಲಿ.

### ದಿನ ಪಂಚಾಂಗ

ಸೆಪ್ಟಂಬರ್, 16-2026, ಬುಧವಾರ ವರ್ಷ ಋತು,
ಭಾದ್ರಪದ ಮಾಸ, ಶುದ್ಧ ಪಕ್ಷ
ಪಂಚಮಿ ತಿಥಿ ಬೆ.8:45
ವಿಶಾಖ ನಕ್ಷತ್ರ ಸಾ.6:14
ರಾಹುಕಾಲ ಮ 12:14-1:45
ಪರ್ಯೂಷಣ್ ಆರಂಭ (ದಿಗಂಬರ), ವಿಶ್ವ ಓರ್ಝೋನ್ ದಿನ, ಬಾದಾಮಿ । ಅಗಸನಕೊಪ್ಪ ಶಿವಾನಂದ ಜಾತ್ರೆ, ವಿದ್ಯಾನಿಧಿತೀರ್ಥ ಆರಾಧನೆ, ಕಮತಗಿ ಗಿರಿಮಠ ಜಾತ್ರೆ, ಕಾದರಹಳ್ಳಿ ಗೌರಾಂಬಾ ಮಾತಾಜಿ ಪುಣ್ಯದಿನ, ಕರೋಡಪತಿ ಗಣಪತಿ ವ್ರತ, ಮಣಕವಾಡ ಅಂ. ಮೃತ್ಯುಂಜಯಸ್ವಾಮಿ ಪುಣ್ಯಸ್ಮರಣೆ, ಶಿಗ್ಗಾಂವ ಗಜಾನನ ಪುಣ್ಯದಿನ, ಮತ್ಸ್ಯೇಂದ್ರನಾಥ ಜ.

### ಆಧ್ಯಾತ್ಮ

## ಗಣೇಶ ಚತುರ್ಥಿಯ ಅಂಗವಾಗಿ ನಡೆದ ನೈಸರ್ಗಿಕ ಗಣಪತಿಯ ಆರಾಧನೆ



● ವಿಕ್ರಮ ವಾಹಿನಿ । ಗೋಕರ್ಣ

ಪ್ರವಾಹಕ್ಕೆ ವಿರುದ್ಧವಾಗಿ ಈಜುವ ಧೈರ್ಯ ನಮಗಿರಬೇಕು. ಪ್ಲಾಸ್ಟಿಕ್ ಹಾಳು ಎಂದು ಆಧುನಿಕ ವಿಜ್ಞಾನ ಹೇಳುತ್ತಿದೆಯಾದರೂ, ಪ್ಲಾಸ್ಟಿಕ್ ಇಂದು ಎಲ್ಲೆಡೆ ನಮ್ಮನ್ನು ಆವರಿಸಿದೆ. ಬದಲಾವಣೆಯು ಬೇರೆಯವರ ಮನೆಯಿಂದಲ್ಲ, ನಮ್ಮ ಮನೆಯಿಂದ ಮತ್ತು ನಮ್ಮಿಂದಲೇ ಆರಂಭವಾಗಬೇಕು ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 15.09.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ಉತ್ತಮವಾದದ್ದನ್ನು ಕೆಡಿಸಿ, ಹಾನಿಕಾರಕವಾದುದನ್ನು ಸಮಾಜಕ್ಕೆ ಕೊಡುವುದೇ ಕಲಿಯುಗದ ಲಕ್ಷಣ. ಪ್ಲಾಸ್ಟಿಕ್, ಕೃತಕ ವಸ್ತುಗಳು ಅತ್ಯಂತ ಹಾನಿಕಾರಕ ಎಂದು ವಿಜ್ಞಾನವೇ ಒಪ್ಪಿಕೊಂಡಿದ್ದರೂ ಅವುಗಳ ಉತ್ಪಾದನೆ ಮತ್ತು ಬಳಕೆ ನಿಲ್ಲುತ್ತಿಲ್ಲ ಎಂದರು.

ಮನುಷ್ಯನ ಆಲೋಚನೆ ಆಹಾರವನ್ನು ಅವಲಂಭಿಸಿದೆ. ಆಹಾರದ ಮೇಲೆ ಪಾತ್ರೆಗಳು ಪರಿಣಾಮವನ್ನು ಬೀರುತ್ತದೆ. ಇಂದು ನಮ್ಮ ಮನೆಗಳಲ್ಲಿ

ಪಾರಂಪರಿಕ ತಾಮ್ರ, ಹಿತ್ತಾಳೆ ಹಾಗೂ ಕಂಚಿನ ಪಾತ್ರೆಗಳು ಮನೆಯ ಮೆತ್ತನ್ನು ಸೇರಿದೆ. ಅವುಗಳನ್ನು ಬಳಸುತ್ತಲೇ ಇಲ್ಲ. ಒಂದೆರಡು ತಲೆಮಾರಿನ ಹಿಂದೆ ಬಡತನ ಇತ್ತಾದರೂ ಅವರು ಸೂಕ್ತವಾದ ಲೋಹದ ಪಾತ್ರೆಗಳನ್ನೇ ಬಳಸುತ್ತಿದ್ದರು ಎಂದರು.

ಧರ್ಮಶಾಸ್ತ್ರವು ಮಣ್ಣಿನ ಪಾತ್ರೆಯನ್ನು ಬಳಕೆಗೆ ಹೇಳಿಲ್ಲ. ಆದರೆ ಅದನ್ನು ಸೂಕ್ಷ್ಮವಾಗಿ ಗಮನಿಸಿದಾಗ ಎಂಜಲಾದ ಮಣ್ಣಿನ ಪಾತ್ರೆಯನ್ನು ಪುನಃ ಬಳಸಬಾರದು ಎಂಬುದು ಧರ್ಮಶಾಸ್ತ್ರದ ಸಾರವಾಗಿದ್ದು, ಎಂಜಲಾಗದ ಮಣ್ಣಿನ ಪಾತ್ರೆಯನ್ನು ಬಳಸಲು ವಿರೋಧವಿಲ್ಲ ಎಂದು ಅಭಿಪ್ರಾಯಪಟ್ಟರು.

ಶ್ಯಾಮಸೂರ್ಯ ಭಟ್ಟ ಮುಳಿಗದ್ದೆ ಕುಟುಂಬದವರು ಗುರುಭಿಕ್ಷಾಸೇವೆ ಸಮರ್ಪಿಸಿದರು. ಸುಬ್ರಹ್ಮಣ್ಯ ಸೇರಾಜೆ ದಂಪತಿಗಳು ದಿನಪ್ರಧಾನರಾಗಿ ಉಪಸ್ಥಿತರಿದ್ದರು. ಗಣೇಶ ಚತುರ್ಥಿಯ ಅಂಗವಾಗಿ ಶ್ರೀ ರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಮಣ್ಣಿನಿಂದ ಮಾಡಿದ ನೈಸರ್ಗಿಕ ಬಣ್ಣದಿಂದ ವಿಶೇಷವಾಗಿ ತಯಾರಿಸಿದ ಗಣಪತಿಯನ್ನು ಪೂಜಿಸಿದರು. ಮಠೀಯ ಪದ್ಧತಿಯಂತೆ ಪೂಜೆಯನ್ನು ಸಲ್ಲಿಸಿದ ಶ್ರೀಗಳು ಲೋಕ ಕಲ್ಯಾಣಕ್ಕಾಗಿ ವಿಶೇಷ ಪ್ರಾರ್ಥನೆಯನ್ನು ಸಲ್ಲಿಸಿದರು.

# 'ಬಿಜೆಪಿಯವರ ಎದೆ ಸೀಳಿದರೆ ರಾಜ್ಯದ ಹಿತ ಕಾಯುವ ಒಂದೇ ಒಂದು ಅಂಶವಿಲ್ಲ'

● ವಿಕ್ರಮ ವಾಹಿನಿ । ಬೆಂಗಳೂರು

"ಬಿಜೆಪಿಯವರ ಎದೆ ಸೀಳಿದರೆ ರಾಜ್ಯದ ಹಿತ ಕಾಯುವ ಯಾವ ಅಂಶವೂ ಇಲ್ಲ. ಅವರದ್ದು ಕೇವಲ ರಾಜಕೀಯ ಮನಸ್ಥಿತಿ. ಅವರನ್ನು ಸರಿಪಡಿಸಲು ಆಗುವುದಿಲ್ಲ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಕಿಡಿಕಾರಿದರು.

ಕೆ ಆರ್ ವೃತ್ತದಲ್ಲಿ ಸರ್ ಎಂ ವಿಶ್ವೇಶ್ವರಯ್ಯ ಅವರ ಪ್ರತಿಮೆಗೆ ಶಿವಕುಮಾರ್ ಅವರು ಮಾಲಾರ್ಪಣೆ ಮಾಡಿದ ಬಳಿಕ ಮಾಧ್ಯಮಗಳ ಪ್ರಶ್ನೆಗಳಿಗೆ ಮಂಗಳವಾರ ಪ್ರತಿಕ್ರಿಯೆ ನೀಡಿದರು.

ವಂದೇ ಮಾತರಂ ವಿಚಾರವಾಗಿ ಬಿಜೆಪಿ ಹೋರಾಟಕ್ಕೆ ಕರೆ ನೀಡಿರುವ ಬಗ್ಗೆ ಕೇಳಿದಾಗ, "ಎಲ್ಲದರಲ್ಲೂ ತಪ್ಪು ಕಂಡುಹಿಡಿಯುವ ಪ್ರವೃತ್ತಿ ಬಿಜೆಪಿ ನಾಯಕರದ್ದು. ಒಬ್ಬ ಪೊಲೀಸ್ ಅಧಿಕಾರಿ ಏನು ತಪ್ಪು ಮಾತನಾಡಿದ್ದಾರೆ? ಯಾವುದೇ ಅಹಿತಕರ ಘಟನೆ ನಡೆಯಬಾರದು ಎಂದು ಎಚ್ಚರಿಕೆ ಮಾತುಗಳನ್ನು ಆಡಿದ್ದಾರೆ. ಅದಕ್ಕೆ ಬಿಜೆಪಿಯವರು ಮಹಾರಾಜರನ್ನು ಬೀದಿಗೆ ತಂದು ನಿಲ್ಲಿಸಿದ್ದಾರೆ. ಪಂಚಾಯಿತಿ ಮಟ್ಟದ ವಿಚಾರಕ್ಕೆ ವಿರೋಧ ಪಕ್ಷದ ನಾಯಕರು ಹೋಗಿದ್ದು, ಅವರು ಈ ಮಟ್ಟಕ್ಕೆ ಇಳಿದಿದ್ದು ಯಾಕೆ ಎಂದು ನನಗೆ ಗೊತ್ತಿಲ್ಲ. ವಿರೋಧ ಪಕ್ಷದ ನಾಯಕ ಸ್ಥಾನ ಸಂವಿಧಾನಿಕ ಹುದ್ದೆ. ಅವರಿಂದ ಇನ್ನು ಉನ್ನತ ನಡೆ ನಿರೀಕ್ಷೆ ಮಾಡುತ್ತಿದ್ದೇನೆ" ಎಂದು ತಿಳಿಸಿದರು.

"ಅವರು ಹೇಳಿದರು ಎಂದು ಪ್ರಹ್ಲಾದ್ ಜೋಶಿಯಿಂದ ಎಲ್ಲರೂ ಟ್ವೀಟ್ ಮಾಡಿದ್ದಾರೆ. ಸಮಾಜದಲ್ಲಿ ಕಾನೂನು ಪಾಲನೆ ಮಾಡಬೇಕಾಗಿರುವುದು ಯಾರು? ಬಿಜೆಪಿಯವರು ಜನರನ್ನ ಪ್ರಚೋದನೆ ಮಾಡುವ ಕೆಲಸ ಮಾಡುತ್ತಿದ್ದು, ಇನ್ನಾದರೂ ಇದನ್ನು ಬಿಡಲಿ. ಭಾರತವನ್ನು ಕರ್ನಾಟಕದ ಮೂಲಕ ಗೌರವ ಸಿಗುತ್ತಿದ್ದು, ಇಲ್ಲಿ ಅಹಿತಕರ ಘಟನೆ ನಡೆದರೆ ತೊಂದರೆ ಆಗುವುದು ಭಾರತಕ್ಕೆ. ಪ್ರಧಾನ ಮಂತ್ರಿಗಳು ದೇಶದ ಬಗ್ಗೆ ಕಾಣುತ್ತಿರುವ ಕನಸಿಗೆ ಇಲ್ಲಿನ ಬಿಜೆಪಿ ನಾಯಕರು ಧಕ್ಕೆ ತರುವಂತೆ ರಾಜಕಾರಣ ಮಾಡುತ್ತಿದ್ದಾರೆ.

**ಬರ ವಿಚಾರದಲ್ಲಿ ರಾಜಕೀಯ ಮಾಡಿದರೆ ಅರ್ಥವಿಲ್ಲ**

ದಿನೇ ದಿನೆ ಮಳೆ ಕಡಿಮೆಯಾಗುತ್ತಿರುವ ಬಗ್ಗೆ ಕೇಳಿದಾಗ, "ಮಳೆ ಕ್ಷೀಣಿಸುತ್ತಿದೆ. ಶಾಸಕರು ಆತಂಕಪಡುವ ಅಗತ್ಯವಿಲ್ಲ. ರಾಜಕೀಯಕ್ಕಾಗಿ ಪ್ರತಿಭಟನೆ ಮಾಡುವುದರಲ್ಲಿ ಅರ್ಥವಿಲ್ಲ. ಕೆಲವರು ರಾಜಕೀಯಕ್ಕೆ ಈ ಪರಿಸ್ಥಿತಿ ಬಳಸಿಕೊಳ್ಳುತ್ತಿದ್ದಾರೆ. ಕೇಂದ್ರ ಸರ್ಕಾರ ಪರಿಶೀಲನೆಗೆ ಬಂದಾಗ ವರದಿ ತಪ್ಪಾಗಿರಬಾರದು. ಕೆಲವು ಭಾಗದಲ್ಲಿ ಅಧ್ಯಯನ ಆಗಿದ್ದು, ಉಳಿದ ಕಡೆ ವರದಿ ಸಿದ್ಧವಾಗುತ್ತಿದೆ. ಒಂದು ವಾರ ಮಳೆ ಬೀಳುತ್ತದೆ ಎಂದು ಹವಾಮಾನ ಇಲಾಖೆ ಹೇಳಿತ್ತು, ಆದರೆ ಕೆಲ ಭಾಗದಲ್ಲಿ ಸ್ವಲ್ಪ ಮಳೆ ಆಗಿದ್ದು, ಹೇಳಿಕೊಳುವಂತೆ ಆಗಿಲ್ಲ. ವಿದ್ಯುತ್ ಸಮಸ್ಯೆ ಹೆಚ್ಚಾಗಿದೆ. ಜನರನ್ನು ಮಾನಸಿಕವಾಗಿ ಸಿದ್ಧಪಡಿಸಿ, ಕುಡಿಯುವ ನೀರು ಪೂರೈಕೆಗೆ ತಯಾರಿ ಮಾಡಿಕೊಳ್ಳಲಾಗುತ್ತಿದೆ. ಇದಕ್ಕಾಗಿಯೇ ವಿಶೇಷ ಅಧಿವೇಶನ ಕರೆಯಲಾಗಿದೆ. ರೈತರ ಜೊತೆ ಚರ್ಚೆ ಮಾಡಿ ಇನ್ನಷ್ಟು ಘೋಷಣೆ ಮಾಡಲಾಗುವುದು" ಎಂದು ಹೇಳಿದರು.




ಸಿಎಂ ಡಿ ಕೆ ಶಿವಕುಮಾರ್ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ಮಂಗಳವಾರ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಉದ್ಘಾಟಿಸಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಡಾ ಬಿ ಆರ್ ಅಂಬೇಡ್ಕರ್ ಹಾಗೂ ಬಾಬು ಜಗಜೀವನರಾಂ ಅವರ ಭಾವಚಿತ್ರಗಳಿಗೆ ಪುಷ್ಪ ನಮನ ಸಲ್ಲಿಸಿದರು. ಸಭಿಕರ ಜತೆ ಸಂವಿಧಾನ ಪೀಠಿಕೆ ಓದಿದರು. ನಂತರ ಯುವ ಸಂಸತ್ ಸಭೆ ಕಾರ್ಯಕ್ರಮದ ಲೋಗೋ ಅನಾವರಣಗೊಳಿಸಿದರು. ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಾ. ಜಿ ಪರಮೇಶ್ವರ, ಸಚಿವರಾದ ಕೆ ಎಚ್ ಮುನಿಯಪ್ಪ, ಶಿವರಾಜ್ ತಂಗಡಗಿ, ರಿಜ್ವಾನ್ ಅರ್ಷದ್, ಮಾಜಿ ಸಚಿವರಾದ ಶಾಸಕ ಎಚ್ ಸಿ ಮಹದೇವಪ್ಪ, ಪಿ ಟಿ ಪರಮೇಶ್ವರ್ ನಾಯಕ್, ವಿಧಾನ ಪರಿಷತ್ ಸದಸ್ಯ ಡಿ.ಟಿ. ಶ್ರೀನಿವಾಸ್, ಗ್ಯಾರಂಟಿ ಅನುಷ್ಠಾನ ಸಮಿತಿ ಉಪಾಧ್ಯಕ್ಷ ಮೆಹ್ರೂಸ್ ಖಾನ್, ಆದಿ ಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ ಎಸ್ ಮಂಜುನಾಥ್, ಕರ್ನಾಟಕ ಪರಿಶಿಷ್ಟ ಅಲೆಮಾರಿ ಮತ್ತು ಅರೆಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ. ಪಲ್ಲವಿ, ಭೋವಿ ನಿಗಮದ ಅಧ್ಯಕ್ಷ ಎಂ. ರಾಮಪ್ಪ, ವಕೀಲರ ಸಂಘದ ಅಧ್ಯಕ್ಷ ವಿವೇಕ್ ಸುಬ್ಬಾರೆಡ್ಡಿ ಮತ್ತಿತರರು ಉಪಸ್ಥಿತರಿದ್ದರು.

## ಹೋಬಳಿಗೊಂದು ವಸತಿ ಶಾಲೆ ನಿರ್ಮಾಣಕ್ಕೆ ರೂ 660 ಕೋಟಿ ಮೀಸಲು

ಗ್ರಾಮೀಣ ಭಾಗದ ಬಡ ಹಾಗೂ ಕೂಲಿ ಕಾರ್ಮಿಕರ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸುವ ಉದ್ದೇಶದಿಂದ ರಾಜ್ಯದ ಪ್ರತಿ ಹೋಬಳಿಗೂ ಒಂದು ವಸತಿ ಶಾಲೆ ನಿರ್ಮಿಸುವ ಯೋಜನೆಗೆ ಈಗಾಗಲೇ ರೂ 660 ಕೋಟಿ ಅನುದಾನ ಮೀಸಲಿಡಲಾಗಿದೆ ಎಂದು ಸಮಾಜ ಕಲ್ಯಾಣ ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದರು.

ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಬಾಕಿ ಉಳಿದಿರುವ 65ರಿಂದ 70 ವಸತಿ ಶಾಲೆಗಳ ನಿರ್ಮಾಣಕ್ಕೆ ಶೀಘ್ರ ಅನುಮೋದನೆ ನೀಡುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗಿದೆ ಎಂದರು.

ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿ 874 ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, 2.23 ಲಕ್ಷಕ್ಕೂ ಅಧಿಕ ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದಾರೆ. ಈ ಶಾಲೆಗಳಲ್ಲಿ ಶೇ.95ರಿಂದ 99ರಷ್ಟು ಫಲಿತಾಂಶ ದಾಖಲಾಗುತ್ತಿರುವುದು ಗ್ರಾಮೀಣ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರೆಯುತ್ತಿರುವುದಕ್ಕೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಸಮಾಜ ಕಲ್ಯಾಣ ಇಲಾಖೆಯ 2,011 ವಿದ್ಯಾರ್ಥಿ ನಿಲಯಗಳಲ್ಲಿ 2.22 ಲಕ್ಷಕ್ಕೂ ಅಧಿಕ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು,



ಶೇ.86ರಷ್ಟು ಫಲಿತಾಂಶ ದಾಖಲಾಗುತ್ತಿದೆ. ಹಳೆಯ ವಿದ್ಯಾರ್ಥಿ ನಿಲಯಗಳನ್ನು ಹಂತ ಹಂತವಾಗಿ ನವೀಕರಿಸಿ, ವಸತಿ ಶಾಲೆಗಳ ಮಾದರಿಯಲ್ಲಿ ಉತ್ತಮ ಶೌಚಾಲಯ ಹಾಗೂ ಅಗತ್ಯ ಮೂಲಸೌಕರ್ಯ ಕಲ್ಪಿಸಿದರೆ ಫಲಿತಾಂಶವನ್ನು ಇನ್ನಷ್ಟು ಸುಧಾರಿಸಬಹುದು ಎಂದು ಸಚಿವರು ಹೇಳಿದರು.

ಕಳೆದ 20 ವರ್ಷಗಳಿಂದ ಸೇವಾ ಬಡ್ತಿ ದೊರೆಯದೆ ಇರುವ 540 ವಾರ್ಡನ್‌ಗಳು ಹಾಗೂ ಅಡುಗೆ ಸಿಬ್ಬಂದಿಗೆ ಸೂಕ್ತ ಬಡ್ತಿ ನೀಡುವ ಅಗತ್ಯವಿದೆ ಎಂದರು.

ಡಾ. ಬಿ.ಆರ್. ಅಂಬೇಡ್ಕರ್ ಅವರು ನೀಡಿದ ಸಂವಿಧಾನದ ಮೌಲ್ಯಗಳು ಹಾಗೂ ಪ್ರಜಾಪ್ರಭುತ್ವದ ಆಶಯಗಳನ್ನು ಯುವಜನರಲ್ಲಿ ಬಿತ್ತುವ ಉದ್ದೇಶದಿಂದ ಯುವ ಸಂಸತ್ತು ಹಾಗೂ ಚರ್ಚಾ ಸ್ಪರ್ಧೆಗಳನ್ನು ಆಯೋಜಿಸಲಾಗುತ್ತಿದೆ. ಬಸವಣ್ಣನವರ ಅನುಭವ ಮಂಟಪದ ಮಾದರಿಯಲ್ಲಿ ನ.26ರಂದು ರಾಜ್ಯಮಟ್ಟದ ಯುವ ಸಂಸತ್ತು ಕಾರ್ಯಕ್ರಮ ಆಯೋಜಿಸಲಾಗುವುದು ಎಂದು ಮುನಿಯಪ್ಪ ತಿಳಿಸಿದರು.

ಎಲ್ಲ ಜಿಲ್ಲೆಗಳಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಯುವ ಸಂಸತ್ತಿಗೆ ಚಾಲನೆ ನೀಡಲಾಗಿದ್ದು, ತಾಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗುತ್ತಿದೆ. ಪ್ರತಿ ವಿಧಾನಸಭಾ ಕ್ಷೇತ್ರದಿಂದ ಒಬ್ಬರಂತೆ ಆಯ್ಕೆಯಾಗುವ 224 ವಿದ್ಯಾರ್ಥಿಗಳನ್ನೊಳಗೊಂಡ ಚರ್ಚಾ ಕಾರ್ಯಕ್ರಮವನ್ನು ನ.26ರಂದು ನಡೆಸಲಾಗುವುದು ಎಂದರು.

ದೇಶದ ಪ್ರಜಾಪ್ರಭುತ್ವವನ್ನು ಬಲಪಡಿಸಲು ಹಾಗೂ ಸಂವಿಧಾನದ ಮೌಲ್ಯಗಳನ್ನು ರಕ್ಷಿಸಲು ಯುವಪೀಳಿಗೆಯ ಜಾಗೃತಿ ಅತ್ಯಂತ ಮುಖ್ಯ. ಶಿಕ್ಷಕರ ಮಾರ್ಗದರ್ಶನ ಮತ್ತು ಉತ್ತಮ ಶೈಕ್ಷಣಿಕ ವಾತಾವರಣದ ಮೂಲಕ ವಿದ್ಯಾರ್ಥಿಗಳು ದೇಶದ ಮುಂಚೂಣಿಗೆ ಬರಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಉಪ ಮುಖ್ಯಮಂತ್ರಿ ಜಿ.ಪರಮೇಶ್ವರ್, ಸಚಿವರಾದ ಶಿವರಾಜ್ ತಂಗಡಗಿ, ರಿಜ್ವಾನ್ ಅರ್ಷದ್, ಮಾಜಿ ಸಚಿವ ಎಚ್.ಸಿ.ಮಹದೇವಪ್ಪ ಸೇರಿದಂತೆ ವಿವಿಧ ನಿಗಮಗಳ ಅಧ್ಯಕ್ಷರು, ಸರ್ಕಾರದ ಕಾರ್ಯದರ್ಶಿ ಮೋಹನ್ ರಾಜ್, ಆಯುಕ್ತ ರಾಕೇಶ್ ಕುಮಾರ್ ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

## "ಸರ್ಕಾರದ ವತಿಯಿಂದ ಇಂಜಿನಿಯರ್‌ಗಳ ದಿನ ಆಚರಣೆ"

● ವಿಕ್ರಮ ವಾಹಿನಿ । ಬೆಂಗಳೂರು

"ಮುಂದಿನ ವರ್ಷದಿಂದ ಸರ್ಕಾರದ ವತಿಯಿಂದ ಇಂಜಿನಿಯರ್ ಗಳ ದಿನ ಆಚರಣೆ ಮಾಡಲಾಗುವುದು" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ತಿಳಿಸಿದರು.

ಕೆ ಆರ್ ವೃತ್ತದಲ್ಲಿ ಸರ್ ಎಂ ವಿಶ್ವೇಶ್ವರಯ್ಯ ಅವರ ಪ್ರತಿಮೆಗೆ ಶಿವಕುಮಾರ್ ಅವರು ಮಾಲಾರ್ಪಣೆ ಮಾಡಿದ ಬಳಿಕ ಮಾಧ್ಯಮಗಳಿಗೆ ಮಂಗಳವಾರ ಪ್ರತಿಕ್ರಿಯೆ ನೀಡಿದರು.

"ಸರ್ಕಾರ ವತಿಯಿಂದ ಇಂಜಿನಿಯರ್ ದಿನ ಆಚರಿಸುವ ಪ್ರಸ್ತಾವನೆ ನೀಡಿದ್ದು, ನಾನು ಅದಕ್ಕೆ ಸಮ್ಮತಿ ಸೂಚಿಸಿದ್ದೇನೆ. ನಮ್ಮ ರಾಜ್ಯದಲ್ಲಿ ಪ್ರತಿ ವರ್ಷ 1 ಲಕ್ಷಕ್ಕೂ ಹೆಚ್ಚು ತಯಾರು ಮಾಡುತ್ತಿದೆ. ಭಾರತದಲ್ಲಿ ಅತಿ ಹೆಚ್ಚು ಇಂಜಿನಿಯರ್ ಇದ್ದು, ಅವರನ್ನು ಗುರುತಿಸುವುದು ನಮ್ಮ ಕರ್ತವ್ಯ. ಎಲ್ಲಾ ಇಂಜಿನಿಯರ್ ಗಳು ರಾಜ್ಯದ ಉದ್ದಗಲ ಗಮನಿಸಬೇಕು. ಇದರ ರೂಪುರೇಷೆಗಳನ್ನು ಅಧಿಕಾರಿಗಳ ಜೊತೆ ಚರ್ಚಿಸಿ ತೀರ್ಮಾನಿಸಲಾಗುವುದು" ಎಂದು ತಿಳಿಸಿದರು.

ಅಭಿವೃದ್ಧಿಗೆ ಅಡಿಪಾಯ ಹಾಕುವವರು ಇಂಜಿನಿಯರ್ ಗಳು

"ಇಂದು ಇಂಜಿನಿಯರ್ ಗಳ ದಿನವಾಗಿದ್ದು, ಸರ್ ಎಂ ವಿಶ್ವೇಶ್ವರಯ್ಯ ಅವರಿಗೆ ಸರ್ಕಾರದ ಪರವಾಗಿ ಮಾಲಾರ್ಪಣೆ ಮಾಡಲಾಗಿದೆ.

ಇಂಜಿನಿಯರ್ ಗಳು ದೇಶದ ಆಸ್ತಿ. ವಿಜ್ಞಾನಿಗಳ ಸಂಶೋಧನೆಗಳನ್ನು ಕಾರ್ಯಗತಗೊಳಿಸುತ್ತಿರುವವರು ಇಂಜಿನಿಯರ್ ಗಳು. ಎಲ್ಲಾ ಅಭಿವೃದ್ಧಿಗೆ ಅಡಿಪಾಯ ಹಾಕುವವರು ಇಂಜಿನಿಯರ್ ಗಳು. ವಾಸ್ತುಶಿಲ್ಪದ ಪರಂಪರೆಯಲ್ಲಿ ನಾವು ಇಂಜಿನಿಯರ್ ಗಳನ್ನು ಗುರುತಿಸುತ್ತಿದ್ದೆವು. ಈಗ ಇಂಧನ, ಕಟ್ಟಡ ನಿರ್ಮಾಣ, ಐಟಿ ತಂತ್ರಜ್ಞಾನದಲ್ಲಿ ಪ್ರಮುಖ ಪಾತ್ರ ವಹಿಸುತ್ತಿದ್ದಾರೆ. ವಿಶ್ವೇಶ್ವರಯ್ಯ ಅವರು ದೇಶಕ್ಕೆ ಮಾದರಿ. ಕರ್ನಾಟಕಕ್ಕೆ ಅವರ ಕೊಡುಗೆ ಅಪಾರ" ಎಂದು ತಿಳಿಸಿದರು.



ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮಂಗಳವಾರ ಭಾರತ ರತ್ನ ಸರ್ ಎಂ. ವಿಶ್ವೇಶ್ವರಯ್ಯ ಅವರ ಜನ್ಮ ದಿನಾಚರಣೆ ಅಂಗವಾಗಿ ಕೆ.ಆರ್. ವೃತ್ತದಲ್ಲಿರುವ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

## "ನಕಲಿ ಔಷಧ ಜಾಲ ವಿರುದ್ಧ ಕಠಿಣ ಕ್ರಿಮಿನಲ್ ಕ್ರಮ"

1ನೇ ಪುಟದಿಂದ

ಸಾಮಾಜಿಕ ಜಾಲತಾಣಗಳಲ್ಲಿ ವಿವಿಧ ಆಸ್ಪತ್ರೆಗಳಿಗೆ ನಕಲಿ ಔಷಧ ಪೂರೈಕೆಯಾಗಿದೆ ಎಂಬ ವದಂತಿಗಳು ಹರಿದಾಡುತ್ತಿದ್ದು, ಸಾರ್ವಜನಿಕರು ಆತಂಕಪಡಬಾರದು. ಎಸ್‌ಐಟಿ ತನಿಖೆಯ ಬಳಿಕ ಸತ್ಯಾಸತ್ಯತೆ ಅಧಿಕೃತವಾಗಿ ಹೊರಬರಲಿದೆ. ತಪ್ಪಿತಸ್ಥರ ವಿರುದ್ಧ ಶೂನ್ಯ ಸಹಿಷ್ಣುತೆ ನೀತಿ ಅನುಸರಿಸಲಾಗುವುದು ಎಂದು ಖಾದರ್ ಹೇಳಿದರು.

**ಸೆ.18ರಂದು ಸಂಪುಟ ಸಭೆ:** ಮಂಗಳೂರಿನ ನೂತನ ಜಿಲ್ಲಾಧಿಕಾರಿ ಕಚೇರಿ ಸಂಕೀರ್ಣದಲ್ಲಿ ಸೆ.18ರಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ನಡೆಯಲಿರುವ ಸಚಿವ ಸಂಪುಟ ಸಭೆ ಕರಾವಳಿ ಭಾಗದ ಅಭಿವೃದ್ಧಿಗೆ ವೇಗ ನೀಡಲಿದೆ. ಸಭೆಯಲ್ಲಿ ಕರಾವಳಿಯ ಮೂರು ಜಿಲ್ಲೆಗಳ ಸಮಸ್ಯೆಗಳು, ಪ್ರವಾಸೋದ್ಯಮ ಹಾಗೂ ಕೈಗಾರಿಕಾ ಅಭಿವೃದ್ಧಿಗೆ ಆದ್ಯತೆ ನೀಡಲಾಗುವುದು. ವಿವಿಧ ವಲಯಗಳ ಪಾಲುದಾರರಿಂದ ಪ್ರಸ್ತಾವನೆಗಳನ್ನು ಪಡೆದು ಸರ್ಕಾರಕ್ಕೆ ಸಲ್ಲಿಸಲಾಗಿದೆ ಎಂದರು.

ತುಳು ಭಾಷೆಯನ್ನು ರಾಜ್ಯದ ಎರಡನೇ ಅಧಿಕೃತ ಭಾಷೆಯನ್ನಾಗಿ ಘೋಷಿಸುವ ಬಹುದಿನಗಳ ಬೇಡಿಕೆಗೆ ಅಗತ್ಯ ಕಾನೂನು ಹಾಗೂ ಹಣಕಾಸು ಪ್ರಕ್ರಿಯೆಗಳನ್ನು ಚುರುಕುಗೊಳಿಸಲಾಗಿದ್ದು, ಸಂಪುಟ ಸಭೆಯಲ್ಲಿ ಈ ಬಗ್ಗೆ ಸೂಕ್ತ ತೀರ್ಮಾನವಾಗುವ ವಿಶ್ವಾಸವಿದೆ ಎಂದರು.

## ಕರ್ನಾಟಕ ಪ್ರವಾಸೋದ್ಯಮದಲ್ಲಿ ಹೂಡಿಕೆಗೆ ಯುಎಇ ಕನ್ನಡಿಗರಿಗೆ ಆಹ್ವಾನ

● ವಿಕ್ರಮ ವಾಹಿನಿ । ದುಬೈ

ಕರ್ನಾಟಕದ ಪ್ರವಾಸೋದ್ಯಮ, ಮೂಲ ಸೌಕರ್ಯ ಹಾಗೂ ಆರ್ಥಿಕ ಬೆಳವಣಿಗೆಯಲ್ಲಿ ಸಕ್ರಿಯ ಪಾಲುದಾರರಾಗುವಂತೆ ಯುಎಇ ಯಲ್ಲಿರುವ ಕನ್ನಡಿಗ ಉದ್ಯಮಿಗಳು ಮತ್ತು ಹೂಡಿಕೆದಾರರಿಗೆ ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ಆಹ್ವಾನ ನೀಡಿದರು.

ಕರ್ನಾಟಕ ಎನ್‌ಆರ್‌ಐ ಫೋರಂ ಯುಎಇ ಆಯೋಜಿಸಿದ್ದ 'ಇನ್ವೆಸ್ಟ್ ಇನ್ ಕರ್ನಾಟಕ-ಎನ್‌ಆರ್‌ಐ ಬಿಸಿನೆಸ್ ಕಮ್ಯುನಿಟಿ ಮೀಟ್, ದುಬೈ 2026' ಕಾರ್ಯಕ್ರಮದಲ್ಲಿ 20ಕ್ಕೂ ಹೆಚ್ಚು ಕ್ಷೇತ್ರಗಳನ್ನು ಪ್ರತಿನಿಧಿಸಿದ್ದ 65 ಪ್ರಮುಖ ಕನ್ನಡಿಗ ಉದ್ಯಮಿಗಳನ್ನು ಉದ್ದೇಶಿಸಿ ಅವರು ಮಾತನಾಡಿದರು.

ಜಾಗತಿಕ ಹೂಡಿಕೆದಾರರಿಗೆ ಕರ್ನಾಟಕದಲ್ಲಿ ಅಪಾರ ಅವಕಾಶಗಳಿದ್ದು, ಗಂಭೀರ ಹಾಗೂ ಗುಣಮಟ್ಟದ ಹೂಡಿಕೆ ಪ್ರಸ್ತಾವನೆಗಳಿಗೆ ರಾಜ್ಯ ಸರ್ಕಾರ ಅಗತ್ಯ ಸಹಕಾರ ಮತ್ತು ನೆರವು ನೀಡಲಿದೆ ಎಂದು ಜಾರ್ಜ್ ಭರವಸೆ ನೀಡಿದರು. ಪ್ರವಾಸೋದ್ಯಮ, ವ್ಯಾಪಾರ, ಮೂಲಸೌಕರ್ಯ, ಸಂಪರ್ಕ ವ್ಯವಸ್ಥೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಹೂಡಿಕೆ ಅವಕಾಶಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿ ಡಾ. ರಾಮ್ ಪ್ರಸಾತ್ ಮನೋಹರ್ ಅವರು




ಕರ್ನಾಟಕದ ಪ್ರವಾಸೋದ್ಯಮ ಸಾಮರ್ಥ್ಯ ಹಾಗೂ ಹೂಡಿಕೆ ಅವಕಾಶಗಳ ಕುರಿತು ಮಾಹಿತಿ ನೀಡಿದರು.

ವಿರಾಮ ಪ್ರವಾಸೋದ್ಯಮ, ವ್ಯವಹಾರಿಕ ಪ್ರವಾಸೋದ್ಯಮ, ವೈದ್ಯಕೀಯ, ಆರೋಗ್ಯ-ಕ್ಷೇಮ, ಆಧ್ಯಾತ್ಮಿಕ, ಕರಾವಳಿ ಹಾಗೂ ಅನುಭವಾಧಾರಿತ ಪ್ರವಾಸೋದ್ಯಮ ಕ್ಷೇತ್ರಗಳಲ್ಲಿ ಖಾಸಗಿ ಹೂಡಿಕೆ ಮತ್ತು ಸಾರ್ವಜನಿಕ-ಖಾಸಗಿ ಸಹಭಾಗಿತ್ವಕ್ಕೆ (ಪಿಪಿಪಿ) ಇರುವ ಅವಕಾಶಗಳನ್ನು ವಿವರಿಸಿದರು.

ಗುಣಮಟ್ಟದ ವಸತಿ ಸೌಲಭ್ಯ, ಪ್ರವಾಸಿ ತಾಣಗಳ ಮೂಲಸೌಕರ್ಯ, ಪ್ರವಾಸಿಗರ ಅನುಭವ ಸುಧಾರಣೆ ಹಾಗೂ ಹೊಸ ಪ್ರವಾಸೋದ್ಯಮ ಉತ್ಪನ್ನಗಳ ಅಭಿವೃದ್ಧಿಗೆ ರಾಜ್ಯ ಸರ್ಕಾರ ಒತ್ತು ನೀಡುತ್ತಿದೆ. ಖಾಸಗಿ ವಲಯಕ್ಕೆ ಹೂಡಿಕೆ ಯೋಗ್ಯ ಯೋಜನೆಗಳನ್ನು ರೂಪಿಸಲಾಗುತ್ತಿದೆ ಎಂದು ಅವರು ತಿಳಿಸಿದರು.

ವಿಮಾನ, ರಸ್ತೆ ಹಾಗೂ ಕರಾವಳಿ ಸಂಪರ್ಕ ಸುಧಾರಣೆ, ಹೂಡಿಕೆ ಸೌಲಭ್ಯಗಳು ಮತ್ತು ಕರ್ನಾಟಕವನ್ನು ಅಂತರರಾಷ್ಟ್ರೀಯ ಪ್ರವಾಸೋದ್ಯಮ ತಾಣವಾಗಿ ಪರಿಣಾಮಕಾರಿಯಾಗಿ ಪರಿಚಯಿಸುವ ಕುರಿತು ಉದ್ಯಮಿಗಳೊಂದಿಗೆ ಚರ್ಚೆ ನಡೆಯಿತು.

ರಾಜ್ಯ ನಿಯೋಗದಲ್ಲಿ ಕೆಎಸ್‌ಟಿಡಿಸಿ ಅಧ್ಯಕ್ಷ ಶ್ರೀನಿವಾಸ್ ಎಂ., ವಿಧಾನ ಪರಿಷತ್ ಸದಸ್ಯೆ ಡಾ. ಆರತಿ ಕೃಷ್ಣ ಹಾಗೂ ಕೆಎಸ್‌ಟಿಡಿಸಿ ವ್ಯವಸ್ಥಾಪಕ ನಿರ್ದೇಶಕ ಶಿವಪ್ರಸಾದ್ ಪಿ.ಆರ್. ಉಪಸ್ಥಿತರಿದ್ದರು. ಯುಎಇಯ ಉದ್ಯಮಿಗಳಾದ ಡಾ. ರೊನಾಲ್ಡ್ ಕೊಲಾಸೊ, ಡಾ. ಮೊಯ್ದೀನ್ ತುಂಬೆ ಹಾಗೂ ಕರ್ನಾಟಕ ಎನ್‌ಆರ್‌ಐ ಫೋರಂ ಯುಎಇ ಅಧ್ಯಕ್ಷ ಪ್ರವೀಣ್ ಶೆಟ್ಟಿ ಪಾಲ್ಗೊಂಡಿದ್ದರು.



ಬಿಜೆಪಿ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್. ಸಂತೋಷ್ ಜೀ ಅವರು ಭಾನುವಾರ ದೆಹಲಿಯ ರಾಜೇಂದ್ರನಗರದ ಕೇಂದ್ರ ಕಚೇರಿ ವಿಸ್ತಾರ್ ಹಾಗೂ ಜಿಎಸ್‌ಬಿ ಮಂಡಳ ದೇವಸ್ಥಾನದಲ್ಲಿ ನಡೆದ ವಿನಾಯಕ ಚತುರ್ಥಿ ಪೂಜೆಯಲ್ಲಿ ಪಾಲ್ಗೊಂಡು ವಿಶೇಷ ಪ್ರಾರ್ಥನೆ ಸಲ್ಲಿಸಿದರು.

# ಪಂಚಾಯಿತಿ ಚುನಾವಣೆ: ಪರಮೇಶ್ವರ್ ಮಹತ್ವದ ಸುಳಿವು

● ವಿಕ್ರಮ ವಾಹಿನಿ । ತುಮಕೂರು

ರಾಜ್ಯದಲ್ಲಿ ಬಾಕಿ ಉಳಿದಿರುವ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿ ಚುನಾವಣೆಗಳನ್ನು ಆದಷ್ಟು ಬೇಗ ನಡೆಸಲಾಗುವುದು ಎಂದು ಉಪಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್ ತಿಳಿಸಿದ್ದಾರೆ.

ತುಮಕೂರಿನಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಸಂಬಂಧಿಸಿದಂತೆ ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆ ನಡೆಯುತ್ತಿದೆ. ಅಕ್ಟೋಬರ್‌ನಲ್ಲಿ ಮತದಾರರ ಪಟ್ಟಿ ಅಂತಿಮಗೊಳ್ಳಲಿದ್ದು, ಪಟ್ಟಿ ಅಂತಿಮವಾದ ಬಳಿಕ ಪಂಚಾಯಿತಿ ಚುನಾವಣೆ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದರು.

ಸ್ಥಳೀಯ ಸಂಸ್ಥೆಗಳ ಚುನಾವಣೆ ಕುರಿತು ಸರ್ಕಾರ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುತ್ತಿದ್ದು, ಮತದಾರರ ಪಟ್ಟಿ ಅಂತಿಮಗೊಂಡ ನಂತರ ಚುನಾವಣಾ ಪ್ರಕ್ರಿಯೆಗೆ ಚಾಲನೆ ನೀಡಲಾಗುವುದು ಎಂದು ಹೇಳಿದರು.

# ಪಿಜಿಸಿಇಟಿ ಕೌನ್ಸೆಲಿಂಗ್ ವೇಳಾಪಟ್ಟಿ ಪ್ರಕಟ

● ವಿಕ್ರಮ ವಾಹಿನಿ । ಬೆಂಗಳೂರು

ಎಂಬಿಎ, ಎಂಸಿಎ, ಎಂಇ, ಎಂ.ಟೆಕ್ ಹಾಗೂ ಎಂ.ಆರ್ಕ್ ಕೋರ್ಸ್‌ಗಳ ಪ್ರವೇಶಕ್ಕಾಗಿ ಮೊದಲ ಸುತ್ತಿನ ಸೀಟು ಹಂಚಿಕೆಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ವೇಳಾಪಟ್ಟಿ ಪ್ರಕಟಿಸಿದೆ.

ಅಭ್ಯರ್ಥಿಗಳು ಸೆ.17ರವರೆಗೆ ತಮ್ಮ ಆಯ್ಕೆಗಳನ್ನು ದಾಖಲಿಸಬಹುದು. ಅದೇ ದಿನ ಸಂಜೆ 6ರ ಬಳಿಕ ಅಣಕು ಸೀಟು ಹಂಚಿಕೆ ಫಲಿತಾಂಶ ಪ್ರಕಟಿಸಲಾಗುವುದು. ಅಣಕು ಹಂಚಿಕೆ ಆಧರಿಸಿ ಆಯ್ಕೆಗಳನ್ನು ಬದಲಾಯಿಸಲು, ಹೊಸ ಆಯ್ಕೆ ಸೇರಿಸಲು ಅಥವಾ ತೆಗೆದುಹಾಕಲು ಸೆ.19ರಂದು ಬೆಳಿಗ್ಗೆ 11ರವರೆಗೆ ಅವಕಾಶವಿದೆ ಎಂದು ಕೆಇಎ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ತಿಳಿಸಿದ್ದಾರೆ.

ಸೆ.19ರಂದು ಸಂಜೆ 5ಕ್ಕೆ ತಾತ್ಕಾಲಿಕ ಹಾಗೂ ಸೆ.21ರಂದು ಅಂತಿಮ ಸೀಟು ಹಂಚಿಕೆ ಫಲಿತಾಂಶ ಪ್ರಕಟವಾಗಲಿದೆ. ಸೆ.22ರಿಂದ 24ರವರೆಗೆ ಅಭ್ಯರ್ಥಿಗಳಿಗೆ ಚಾಯ್ಸ್ ಆಯ್ಕೆ ಮಾಡಿಕೊಳ್ಳಲು ಅವಕಾಶ ನೀಡಲಾಗಿದೆ.

ಚಾಯ್ಸ್–1 ಅಥವಾ ಚಾಯ್ಸ್–2 ಆಯ್ಕೆ ಮಾಡುವ ಅಭ್ಯರ್ಥಿಗಳು ಸೆ.25ರೊಳಗೆ ನಿಗದಿತ ಶುಲ್ಕ ಪಾವತಿಸಬೇಕು. ಚಾಯ್ಸ್–1 ಆಯ್ಕೆ ಮಾಡಿದವರು ಸೀಟು ಖಾತರಿ ಚೀಟಿ ಡೌನ್‌ಲೋಡ್ ಮಾಡಿಕೊಂಡು ಸೆ.26ರೊಳಗೆ ಸಂಬಂಧಿಸಿದ ಕಾಲೇಜಿಗೆ ತೆರಳಿ ಪ್ರವೇಶ ಪಡೆಯಬೇಕು ಎಂದು ಕೆಇಎ ತಿಳಿಸಿದೆ.

# ಭಜನ್‌ಲಾಲ್ ತವರು ಜಿಲ್ಲೆಯಲ್ಲಿ ಬಿಜೆಪಿಗೆ ಮುಖಭಂಗ

● ವಿಕ್ರಮ ವಾಹಿನಿ । ಜೈಪುರ

ರಾಜಸ್ಥಾನದ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮುಖ್ಯಮಂತ್ರಿ ಭಜನ್‌ಲಾಲ್ ಶರ್ಮಾ ಅವರ ತವರು ಜಿಲ್ಲೆಯಾದ ಭರತ್‌ಪುರ ಮಹಾನಗರ ಪಾಲಿಕೆಯಲ್ಲಿ ಪಕ್ಷೇತರರು ಭರ್ಜರಿ ಗೆಲುವು ದಾಖಲಿಸಿದ್ದಾರೆ. ಒಟ್ಟು 65 ವಾರ್ಡ್‌ಗಳ ಪೈಕಿ 36ರಲ್ಲಿ ಪಕ್ಷೇತರ ಅಭ್ಯರ್ಥಿಗಳು ಜಯಗಳಿಸಿದ್ದು, ಬಿಜೆಪಿ ಹಾಗೂ ಕಾಂಗ್ರೆಸ್‌ಗೆ ಹಿನ್ನಡೆಯಾಗಿದೆ.

ಬಿಜೆಪಿ 20 ಸ್ಥಾನ ಗೆದ್ದರೆ, ಕಾಂಗ್ರೆಸ್ 7 ಸ್ಥಾನಗಳಿಗೆ ಸೀಮಿತವಾಗಿದೆ. ಬಿಎಸ್‌ಪಿ ಹಾಗೂ ಆರ್‌ಎಲ್‌ಪಿ ತಲಾ ಒಂದು ಸ್ಥಾನ ಪಡೆದಿವೆ. ಪಾಲಿಕೆಯಲ್ಲಿ ಬಹುಮತಕ್ಕೆ 33 ಸದಸ್ಯರ ಬೆಂಬಲ ಅಗತ್ಯವಿರುವುದರಿಂದ, ಮೇಯರ್ ಸ್ಥಾನ ಯಾರ ಪಾಲಾಗಲಿದೆ ಎಂಬುದು ಕುತೂಹಲ ಮೂಡಿಸಿದೆ.

ಮುಖ್ಯಮಂತ್ರಿ ಭಜನ್‌ಲಾಲ್ ಶರ್ಮಾ ಹಾಗೂ ಗೃಹ ಸಚಿವ ಜವಾಹರ್ ಸಿಂಗ್ ಬೇಢಮ್ ಅವರ ತವರು ಜಿಲ್ಲೆಯಾಗಿರುವ ಭರತ್‌ಪುರದಲ್ಲಿ ಆಡಳಿತಾರೂಢ ಬಿಜೆಪಿ ಬೋರ್ಡ್ ರಚಿಸುವ ನಿರೀಕ್ಷೆಯಲ್ಲಿತ್ತು. ಆದರೆ ಫಲಿತಾಂಶದಲ್ಲಿ ಪಕ್ಷೇತರರು ಪ್ರಾಬಲ್ಯ ಸಾಧಿಸಿರುವುದು ಬಿಜೆಪಿಗೆ ರಾಜಕೀಯವಾಗಿ ಹಿನ್ನಡೆಯಾಗಿ ಪರಿಣಮಿಸಿದೆ.

# ರಾಷ್ಟ್ರೀಯ ಮಾಸ್ಟರ್ಸ್ ಈಜು ಸ್ಪರ್ಧೆಯಲ್ಲಿ ಸುನಿತಾ ರಾಣಾ ಅಗರ್ವಾಲ್‌ಗೆ 4 ಚಿನ್ನ

● ವಿಕ್ರಮ ವಾಹಿನಿ । ಹರಿಯಾಣ

*ಹರಿಯಾಣದಲ್ಲಿ ನಡೆದ 22ನೇ ರಾಷ್ಟ್ರೀಯ ಮಾಸ್ಟರ್ಸ್ ಈಜು ಸ್ಪರ್ಧೆ–2026ರಲ್ಲಿ ಕರ್ನಾಟಕವನ್ನು ಪ್ರತಿನಿಧಿಸಿದ ಡಾ. ಸುನಿತಾ ರಾಣಾ ಅಗರ್ವಾಲ್ ಅವರು ನಾಲ್ಕು ಚಿನ್ನದ ಪದಕಗಳನ್ನು ಗೆದ್ದು ರಾಜ್ಯಕ್ಕೆ ಕೀರ್ತಿ ತಂದಿದ್ದಾರೆ.*

*'ಸ್ವಿಮ್ಮಿಂಗ್ ಫೆಡರೇಶನ್ ಆಫ್ ಇಂಡಿಯಾ' ಆಶ್ರಯದಲ್ಲಿ ನಡೆದ ಸ್ಪರ್ಧೆಯಲ್ಲಿ ಅವರು 50 ಮೀಟರ್ ಫ್ರೀಸ್ಟೈಲ್, 100 ಮೀಟರ್ ಫ್ರೀಸ್ಟೈಲ್, 50 ಮೀಟರ್ ಬ್ಯಾಕ್‌ಸ್ಟ್ರೋಕ್ ಹಾಗೂ 50 ಮೀಟರ್ ಬಟರ್‌ಫ್ಲೈ ವಿಭಾಗಗಳಲ್ಲಿ ಚಿನ್ನದ ಪದಕ ಗೆದ್ದರು.*

*50 ಮೀಟರ್ ಫ್ರೀಸ್ಟೈಲ್ ಅನ್ನು 38 ಸೆಕೆಂಡ್‌ಗಳಲ್ಲಿ, 100 ಮೀಟರ್ ಫ್ರೀಸ್ಟೈಲ್ ಅನ್ನು 1 ನಿಮಿಷ 28 ಸೆಕೆಂಡ್‌ಗಳಲ್ಲಿ, 50 ಮೀಟರ್ ಬ್ಯಾಕ್‌ಸ್ಟ್ರೋಕ್ ಅನ್ನು 46 ಸೆಕೆಂಡ್‌ಗಳಲ್ಲಿ ಹಾಗೂ 50 ಮೀಟರ್ ಬಟರ್‌ಫ್ಲೈ ಅನ್ನು 45 ಸೆಕೆಂಡ್‌ಗಳಲ್ಲಿ ಪೂರ್ಣಗೊಳಿಸಿದರು.*




*ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ನಾಲ್ಕು ವಿಭಾಗಗಳಲ್ಲಿ ಚಿನ್ನ ಗೆದ್ದಿರುವುದು ಅವರ ಕಠಿಣ ಪರಿಶ್ರಮ, ಶಿಸ್ತು ಹಾಗೂ ದೈಹಿಕ ಕ್ಷಮತೆಗೆ ಸಾಕ್ಷಿಯಾಗಿದೆ. ಅವರ ಸಾಧನೆ ಕ್ರೀಡಾಪಟುಗಳು ಹಾಗೂ ಫಿಟ್‌ನೆಸ್ ಆಸಕ್ತರಿಗೆ, ವಯಸ್ಸಿನ ಮಿತಿಯನ್ನು ಮೀರಿ ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮಾಡಲು ಪ್ರೇರಣೆಯಾಗಿದೆ.*

*ಹರಿಯಾಣ ಸ್ವಿಮ್ಮಿಂಗ್ ಅಸೋಸಿಯೇಷನ್ ಸಹಯೋಗದಲ್ಲಿ ನಡೆದ ಸ್ಪರ್ಧೆಯಲ್ಲಿ ಸ್ವಿಮ್ಮಿಂಗ್ ಫೆಡರೇಶನ್ ಆಫ್ ಇಂಡಿಯಾ ಹಾಗೂ ಹರಿಯಾಣ ಒಲಿಂಪಿಕ್ ಅಸೋಸಿಯೇಷನ್ ಉಪಾಧ್ಯಕ್ಷ ಅನಿಲ್ ಖತ್ರಿ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು. ಚಾಂಪಿಯನ್ಸ್ ಅಕ್ವಾಟಿಕ್ಸ್ ಅಕಾಡೆಮಿಯ ಮುಖ್ಯ ತರಬೇತುದಾರ ಸಾಯಿ ಜಾಧವ್ ಹಾಗೂ ನಿರ್ವಾಹಕಿ ನಿಖಿತಾ ಸಾಯಿ ಜಾಧವ್ ಅವರು ಸ್ಪರ್ಧೆಯ ಸಿದ್ಧತೆಯಲ್ಲಿ ಸಹಕರಿಸಿದರು.*

*ಡಾ. ಸುನಿತಾ ರಾಣಾ ಅಗರ್ವಾಲ್ ಅವರ ಸಾಧನೆಗೆ ಕರ್ನಾಟಕ ತಂಡ ಹಾಗೂ ಬೆಂಬಲಿಗರು ಅಭಿನಂದನೆ ಸಲ್ಲಿಸಿದ್ದು, ಮುಂದಿನ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಾಸ್ಟರ್ಸ್ ಈಜು ಸ್ಪರ್ಧೆಗಳಲ್ಲೂ ಯಶಸ್ಸು ಸಾಧಿಸಲಿ ಎಂದು ಹಾರೈಸಿದ್ದಾರೆ.*

# ಫಲ-ಪುಷ್ಪ ಪ್ರದರ್ಶನ, ಮಾಧ್ಯಮ ಕೇಂದ್ರ ಉದ್ಘಾಟಿಸಿದ ಟಿಟಿಡಿ ಅಧ್ಯಕ್ಷ

● ವಿಕ್ರಮ ವಾಹಿನಿ । ತಿರುಮಲ

ತಿರುಮಲದಲ್ಲಿ ನಡೆಯಲಿರುವ ವಾರ್ಷಿಕ ಬ್ರಹ್ಮೋತ್ಸವದ ಹಿನ್ನೆಲೆಯಲ್ಲಿ ಕಲ್ಯಾಣ ವೇದಿಕೆಯಲ್ಲಿ ಆಯೋಜಿಸಿರುವ ಫಲ, ಪುಷ್ಪ, ಛಾಯಾಚಿತ್ರ, ಉದ್ಯಾನ, ಅರಣ್ಯ, ಎಸ್‌ವಿಐಟಿಎಸ್‌ಎ ಹಾಗೂ ಆಯುರ್ವೇದ ಸೇರಿದಂತೆ ವಿವಿಧ ಪ್ರದರ್ಶನಗಳನ್ನು ಟಿಟಿಡಿ ಅಧ್ಯಕ್ಷ ಬಿ.ಆರ್. ನಾಯ್ಡು ಮಂಗಳವಾರ ಉದ್ಘಾಟಿಸಿದರು. ರಾಮ್ ಭಗೀಚಾ□2ರಲ್ಲಿ ಸ್ಥಾಪಿಸಿರುವ ಮಾಧ್ಯಮ ಕೇಂದ್ರವನ್ನೂ ಇದೇ ಸಂದರ್ಭದಲ್ಲಿ ಉದ್ಘಾಟಿಸಿದರು.

ನಂತರ ಮಾಧ್ಯಮ ಕೇಂದ್ರದಲ್ಲಿ ಮಾತನಾಡಿದ ಅವರು, ಒಂಬತ್ತು ದಿನಗಳ ಕಾಲ ನಡೆಯಲಿರುವ ವಾರ್ಷಿಕ ಬ್ರಹ್ಮೋತ್ಸವಕ್ಕೆ ಲಕ್ಷಾಂತರ ಭಕ್ತರು ಆಗಮಿಸುವ ನಿರೀಕ್ಷೆಯಿದ್ದು, ಭಕ್ತರಿಗಾಗಿ ಟಿಟಿಡಿ ವ್ಯಾಪಕ ವ್ಯವಸ್ಥೆಗಳನ್ನು ಕೈಗೊಂಡಿದೆ. ಬ್ರಹ್ಮೋತ್ಸವಗಳ ವೈಭವ ಹಾಗೂ ಟಿಟಿಡಿ ಕೈಗೊಂಡಿರುವ ಸಿದ್ಧತೆಗಳನ್ನು ವಿಶ್ವದಾದ್ಯಂತ ಇರುವ ಭಕ್ತರಿಗೆ ತಲುಪಿಸುವಲ್ಲಿ ಮಾಧ್ಯಮಗಳು ಪ್ರಮುಖ ಪಾತ್ರ ವಹಿಸಬೇಕು ಎಂದು ಮನವಿ ಮಾಡಿದರು.

ಮಾಧ್ಯಮ ಪ್ರತಿನಿಧಿಗಳಿಗೆ ಅನುಕೂಲವಾಗುವಂತೆ ಕೇಂದ್ರದಲ್ಲಿ ವೈ–ಫೈ, ಕಂಪ್ಯೂಟರ್‌ಗಳು, ಪ್ರಿಂಟರ್‌ಗಳು, ಅಗತ್ಯ ಬ್ಯಾಂಡ್‌ವಿಡ್ತ್ ಸೇರಿದಂತೆ ಎಲ್ಲ ಮೂಲಸೌಕರ್ಯಗಳನ್ನು ಕಲ್ಪಿಸಲಾಗಿದೆ. ಮಾಧ್ಯಮಗಳು ಈ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಬ್ರಹ್ಮೋತ್ಸವಗಳ ಸುದ್ದಿಗಳನ್ನು ವ್ಯಾಪಕವಾಗಿ ಪ್ರಸಾರ ಮಾಡುವಂತೆ ಕೋರಿದರು.

ಕಲ್ಯಾಣ ವೇದಿಕೆಯಲ್ಲಿ ಆಯೋಜಿಸಿರುವ ವಿವಿಧ ಪ್ರದರ್ಶನಗಳು ಭಕ್ತರನ್ನು ಆಕರ್ಷಿಸುತ್ತಿವೆ.



ಅದರಲ್ಲೂ ತಿರುಮಲದ ಹಿಂದಿನ ಹಾಗೂ ಇಂದಿನ ಸ್ಥಿತಿಗತಿಗಳನ್ನು ಅಪರೂಪದ ಛಾಯಾಚಿತ್ರಗಳ ಮೂಲಕ ಪರಿಚಯಿಸುವ 'ನಾಡು–ನೇಡು' ಫೋಟೋ ಪ್ರದರ್ಶನ ವಿಶೇಷವಾಗಿದೆ. ಕಾಲಕ್ರಮೇಣ ತಿರುಮಲದಲ್ಲಿ ನಡೆದ ಅಭಿವೃದ್ಧಿ ಹಾಗೂ ಬದಲಾವಣೆಗಳನ್ನು ಛಾಯಾಚಿತ್ರಗಳು ಪರಿಣಾಮಕಾರಿಯಾಗಿ ಬಿಂಬಿಸುತ್ತಿವೆ ಎಂದು ನಾಯ್ಡು ಹೇಳಿದರು.

ಭಕ್ತರು ಪ್ರದರ್ಶನಗಳನ್ನು ವೀಕ್ಷಿಸುವ ಮೂಲಕ ತಿರುಮಲದ ಇತಿಹಾಸ, ವೈಭವ ಹಾಗೂ ಅಭಿವೃದ್ಧಿಯ ಕುರಿತು ತಿಳಿದುಕೊಳ್ಳಬೇಕು. ಗಾರ್ಡನ್, ಅರಣ್ಯ, ಶ್ರೀ ವೆಂಕಟೇಶ್ವರ ಶಿಲ್ಪಕಲಾ ಕಾಲೇಜು ಮತ್ತು ಆಯುರ್ವೇದ ಸೇರಿದಂತೆ ವಿವಿಧ ವಿಭಾಗಗಳು ಆಯೋಜಿಸಿರುವ ಪ್ರದರ್ಶನಗಳು ಜ್ಞಾನ ಹಾಗೂ ಆಧ್ಯಾತ್ಮಿಕ ಅನುಭವವನ್ನು ನೀಡುತ್ತಿವೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಶ್ರೀ ವೆಂಕಟೇಶ್ವರಸ್ವಾಮಿಯವರ ಅನುಗ್ರಹದಿಂದ ಭಕ್ತರೆಲ್ಲರೂ ವಾರ್ಷಿಕ ಬ್ರಹ್ಮೋತ್ಸವವನ್ನು ಸಂತೋಷ ಹಾಗೂ ಭಕ್ತಿಭಾವದಿಂದ ವೀಕ್ಷಿಸಿ ಆನಂದಿಸಲಿ ಎಂದು ಅವರು ಹಾರೈಸಿದರು.

ಕಾರ್ಯಕ್ರಮದಲ್ಲಿ ಟಿಟಿಡಿ ಈಓ ಮುದ್ದಾಡ ರವಿಚಂದ್ರ, ಹೆಚ್ಚುವರಿ ಈಓ ಸಿ.ಎಚ್. ವೆಂಕಯ್ಯ ಚೌದರಿ, ಸಿವಿಎಸ್‌ಓ ಮುರಳೀಕೃಷ್ಣ, ಸಿಪಿಆರ್‌ಓ ಡಾ. ಟಿ. ರವಿ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.



ನವದೆಹಲಿಯ ವೇದವ್ಯಾಸ ಗುರುಕುಲದಲ್ಲಿ ನಡೆಯುತ್ತಿರುವ 39ನೇ ಚಾತುರ್ಮಾಸ್ಯ ವೈಭವೋತ್ಸವದ ಅಂಗವಾಗಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರು ಪೇಜಾವರ ಶ್ರೀ ವಿಶ್ವಪ್ರಸನ್ನ ತೀರ್ಥ ಸ್ವಾಮೀಜಿಯವರನ್ನು ಭೇಟಿಯಾಗಿ ಆಶೀರ್ವಾದ ಪಡೆದರು. ಈ ವೇಳೆ ಲೋಕಸಭಾ ಸದಸ್ಯೆ ಬಾನ್ಸುರಿ ಸ್ವರಾಜ್, ರಾಮವೀರ್ ಸಿಂಗ್ ಬಿಧೂರಿ, ಶಾಸಕ ಕೈಲಾಶ್ ಗೆಹ್ಲೋಟ್ ಸೇರಿದಂತೆ ಬಿಜೆಪಿ ಮುಖಂಡರು ಹಾಗೂ ಗುರುಕುಲದ ಪ್ರಮುಖರು ಉಪಸ್ಥಿತರಿದ್ದರು.

# ಬಲಿಷ್ಠ ರಾಷ್ಟ್ರ ನಿರ್ಮಾಣಕ್ಕೆ ಶಿಕ್ಷಕರ ಸಾಂಸ್ಕೃತಿಕ ಸಮ್ಮೇಳನ ಅಗತ್ಯ



● ವಿಕ್ರಮ ವಾಹಿನಿ । ಬೆಂಗಳೂರು

ಶಿಕ್ಷಣದ ಉದ್ದೇಶ ಕೇವಲ ಪಠ್ಯಪುಸ್ತಕದ ಜ್ಞಾನಕ್ಕೆ ಸೀಮಿತವಾಗದೆ, ವಿದ್ಯಾರ್ಥಿಗಳಲ್ಲಿ ಜ್ಞಾನ, ಸಂಸ್ಕಾರ, ಮಾನವೀಯತೆ, ದೇಶಪ್ರೇಮ ಹಾಗೂ ಸಾಮಾಜಿಕ ಹೊಣೆಗಾರಿಕೆಯನ್ನು ಬೆಳೆಸುವುದಾಗಬೇಕು ಎಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ದಕ್ಷಿಣ ವಲಯ–1ರ ಆಯುಕ್ತ ಕೆ.ಎನ್. ರಮೇಶ್ ಹೇಳಿದರು.

ವಿವೇಕಾನಂದ ಕಲಾಕೇಂದ್ರದ ವತಿಯಿಂದ ಆಯೋಜಿಸಿದ್ದ ಶಿಕ್ಷಕರ ಸಾಂಸ್ಕೃತಿಕ ಸಮ್ಮೇಳನದಲ್ಲಿ ಮಾತನಾಡಿದ ಅವರು, ಶಿಕ್ಷಕರು ಕೇವಲ ಬೋಧಕರಲ್ಲ, ವಿದ್ಯಾರ್ಥಿಗಳ ವ್ಯಕ್ತಿತ್ವ ನಿರ್ಮಾಣದ ಶಿಲ್ಪಿಗಳು. ಶಿಕ್ಷಕರು ತಮ್ಮ ಪ್ರತಿಭೆ, ಅನುಭವ ಹಾಗೂ ಸಾಂಸ್ಕೃತಿಕ ಚಿಂತನೆಗಳನ್ನು ಹಂಚಿಕೊಳ್ಳಲು ಸಾಂಸ್ಕೃತಿಕ ಸಮ್ಮೇಳನಗಳು ಉತ್ತಮ ವೇದಿಕೆಯಾಗಿವೆ ಎಂದರು.

ಸಂಗೀತ, ನೃತ್ಯ, ನಾಟಕ, ಜಾನಪದ ಕಲೆ, ಯಕ್ಷಗಾನ, ವಚನ, ಭಾವಗೀತೆ ಹಾಗೂ ದೇಶಭಕ್ತಿ ಗೀತೆಗಳಂತಹ ಕಲಾ ಪ್ರಕಾರಗಳು ವಿದ್ಯಾರ್ಥಿಗಳ ಮನಸ್ಸಿನ ಮೇಲೆ ಪರಿಣಾಮ ಬೀರುತ್ತವೆ. ಪಾಠದ ಮೂಲಕ ತಿಳಿಸುವ ಮೌಲ್ಯಗಳನ್ನು ಕಲೆಯ ಮೂಲಕ ಪರಿಣಾಮಕಾರಿಯಾಗಿ ತಲುಪಿಸಬಹುದು. ಕಲೆ ಮನಸ್ಸುಗಳನ್ನು ಬೆಸೆಯಲಿ, ಸಂಸ್ಕೃತಿ ಸಂಸ್ಕಾರವನ್ನು ಬೆಳೆಸಲಿ, ಶಿಕ್ಷಕರು ದಾರಿದೀಪವಾಗಿ ವಿದ್ಯಾರ್ಥಿಗಳು ರಾಷ್ಟ್ರದ ಶಕ್ತಿಯಾಗಲಿ ಎಂದು ಕರೆ ನೀಡಿದರು.

ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಒಟ್ಟಾಗಿ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ಪರಸ್ಪರ ಬಾಂಧವ್ಯ ಗಟ್ಟಿಯಾಗುತ್ತದೆ. ಜೊತೆಗೆ ತಂಡಭಾವನೆ, ಸಹಕಾರ, ಆತ್ಮವಿಶ್ವಾಸ, ನಾಯಕತ್ವ ಹಾಗೂ ಸಾಮಾಜಿಕ ಕಾಳಜಿ ಬೆಳೆಸಲು ಸಹಕಾರಿಯಾಗುತ್ತದೆ ಎಂದು ಅವರು ಹೇಳಿದರು.

**ಸಂಸ್ಕಾರ ಬೆಳೆಸುವ ವೇದಿಕೆ**

ವಿಜಯವಾಣಿ ಸಹಸಂಪಾದಕ ರಾಘವೇಂದ್ರ ಗಣಪತಿ ಮಾತನಾಡಿ, ವಿದ್ಯಾರ್ಥಿಗಳ ಮನಃಪರಿವರ್ತನೆಗೆ ಪೂರಕವಾದ ಮೌಲ್ಯಾಧಾರಿತ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುವುದು ಅಗತ್ಯ ಎಂದರು.

ಅಮೂಲ್ಯವಾಣಿ ಸಹಸಂಪಾದಕ ಶಿವಕುಮಾರ್ ಮಾತನಾಡಿ, ಶಿಕ್ಷಕರು ವಿದ್ಯಾರ್ಥಿಗಳ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸಿದಾಗ ಅವರಲ್ಲಿ ಆತ್ಮವಿಶ್ವಾಸ ಹಾಗೂ ಶಿಕ್ಷಕರ ಮೇಲಿನ ನಂಬಿಕೆ ಹೆಚ್ಚುತ್ತದೆ. ಇದೇ ಉತ್ತಮ ಶಿಕ್ಷಕ–ವಿದ್ಯಾರ್ಥಿ ಬಾಂಧವ್ಯದ ಅಡಿಪಾಯ ಎಂದರು.

ವಿವೇಕಾನಂದ ಕಲಾಕೇಂದ್ರದ ಗೌರವ ಕಾರ್ಯದರ್ಶಿ ವಿ. ನಾಗರಾಜ್ ಮಾತನಾಡಿ, ಸತ್ಯ, ಧರ್ಮ, ಸೇವೆ, ಸಹನೆ, ಪರಸ್ಪರ ಗೌರವ, ಪ್ರಕೃತಿ ಪ್ರೀತಿ ಹಾಗೂ ದೇಶಪ್ರೇಮದಂತಹ ಭಾರತೀಯ ಮೌಲ್ಯಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ. ಸಾಂಸ್ಕೃತಿಕ ಕಾರ್ಯಕ್ರಮಗಳು ಮನರಂಜನೆಗೆ ಸೀಮಿತವಾಗದೆ ಉತ್ತಮ ನಾಗರಿಕರನ್ನು ರೂಪಿಸುವ ಮಾಧ್ಯಮವಾಗಬೇಕು ಎಂದರು.

ವಿಜಯ ವಿದ್ಯಾ ಸಂಸ್ಥೆಯ ಕಾರ್ಯದರ್ಶಿ ಬಾಲಕೃಷ್ಣ ಮಾತನಾಡಿ, ಡಿಜಿಟಲ್ ಯುಗದಲ್ಲಿ ಮಕ್ಕಳನ್ನು ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣಗಳ ಪ್ರಭಾವದಿಂದ ಹೊರತಂದು ಭಾರತೀಯ ಸಂಸ್ಕೃತಿ, ಕಲೆ ಮತ್ತು ಪರಂಪರೆಯೊಂದಿಗೆ ಬೆಸೆಯಲು ಶಾಲೆಗಳಲ್ಲಿ ಸಾಂಸ್ಕೃತಿಕ ಚಟುವಟಿಕೆಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು ಎಂದರು.

ಈ ಸಂದರ್ಭದಲ್ಲಿ ವಿವೇಕಾನಂದ ಕಲಾಕೇಂದ್ರದ ವತಿಯಿಂದ 'ಗುರುಭ್ಯೋ ನಮಃ' ವಿಶೇಷ ಕಾರ್ಯಕ್ರಮ ಆಯೋಜಿಸಿ ರಂಗಭೂಮಿ ಕ್ಷೇತ್ರದ ಅಂಕಲ್ ಶಾಮ್ ಹಾಗೂ ತುಮಕೂರಿನ ನೀಲಾಲಯ ನೃತ್ಯ ಸಂಸ್ಥೆಯ ನೃತ್ಯ ನಿಪುಣೆ ಬಾಲ ವಿಶ್ವನಾಥನ್ ಅವರಿಗೆ 'ಗುರುಶ್ರೀ' ಪುರಸ್ಕಾರ ನೀಡಿ ಗೌರವಿಸಲಾಯಿತು.

ಬಳಿಕ 'ಅದ್ವೈತಭಾಸ್ಕರ ಶಂಕರ', 'ವಿಶ್ವವಂದ್ಯ ವಿವೇಕಾನಂದ' ಹಾಗೂ 'ಕರ್ನಾಟಕ ರಮಾರಮಣ ಶ್ರೀ ಕೃಷ್ಣದೇವರಾಯ' ರಂಗರೂಪಗಳನ್ನು ಪ್ರದರ್ಶಿಸಲಾಯಿತು. ವಿಜಯ ಕಾಲೇಜಿನ 70ಕ್ಕೂ ಹೆಚ್ಚು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಪಾಲ್ಗೊಂಡರು.

"ಶಿಕ್ಷಕರು ಕೇವಲ ಪಾಠ ಕಲಿಸದೆ ಬದುಕನ್ನು ಕಲಿಸಬೇಕು. ವಿದ್ಯಾರ್ಥಿಗಳು ಕೇವಲ ಪರೀಕ್ಷೆ ಬರೆಯದೆ ಸಮಾಜವನ್ನು ಕಟ್ಟಬೇಕು. ಸಂಸ್ಕೃತಿ ಕೇವಲ ಪ್ರದರ್ಶನವಾಗದೆ ಜೀವನದ ಮೌಲ್ಯವಾಗಬೇಕು" ಎಂಬ ಸಂದೇಶ ಕಾರ್ಯಕ್ರಮದಲ್ಲಿ ಮೊಳಗಿತು.



# ಕಾಂಗ್ರೆಸ್ ಒಡೆದಾಳುವ ನೀತಿ ಅನುಸರಿಸುತ್ತಿದೆ: ನಡ್ಡಾ

**ಕಾಂಗ್ರೆಸ್‌ನ ಒಡೆದಾಳುವ ಹಾಗೂ ಓಲೈಕೆ ರಾಜಕಾರಣಕ್ಕೆ ಅಂತ್ಯ ಹಾಡಿ, ಸೇವೆ–ಸುಶಾಸನ–ಬಡವರ ಕಲ್ಯಾಣದ ಮೂಲಕ 2047ರ ವಿಕಸಿತ ಭಾರತ ನಿರ್ಮಾಣಕ್ಕೆ ಬಿಜೆಪಿ ಬದ್ಧವಾಗಿದೆ ಎಂದು ಕೇಂದ್ರ ಸಚಿವ ಜೆ.ಪಿ. ನಡ್ಡಾ ಹೇಳಿದರು. ಮೋದಿ ನೇತೃತ್ವದಲ್ಲಿ ದೇಶದ ರಾಜಕೀಯ ಸಂಸ್ಕೃತಿಯಲ್ಲಿ ಬದಲಾವಣೆಯಾಗಿದ್ದು, ಅಭಿವೃದ್ಧಿ ಹಾಗೂ ಸಾಮಾಜಿಕ ನ್ಯಾಯಕ್ಕೆ ಆದ್ಯತೆ ನೀಡಲಾಗಿದೆ ಎಂದು ಅವರು ಹೇಳಿದರು.**

● ವಿಕ್ರಮ ವಾಹಿನಿ । ಬೆಂಗಳೂರು

ಕಾಂಗ್ರೆಸ್ ಪಕ್ಷ ಒಡೆದಾಳುವ ಹಾಗೂ ಓಲೈಕೆ ರಾಜಕಾರಣವನ್ನು ಮುಂದುವರಿಸಿಕೊಂಡು ಬಂದಿದ್ದು, ಭ್ರಷ್ಟಾಚಾರದಲ್ಲಿ ಮುಳುಗಿದೆ. ಇದಕ್ಕೆ ಅಂತ್ಯ ಹಾಡಲು ಬಿಜೆಪಿ ಬದ್ಧವಾಗಿದೆ ಎಂದು ಕೇಂದ್ರ ಸಚಿವ ಹಾಗೂ ಬಿಜೆಪಿ ಹಿರಿಯ ನಾಯಕ ಜೆ.ಪಿ. ನಡ್ಡಾ ಆರೋಪಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ದೇಶದ ರಾಜಕೀಯ ಸಂಸ್ಕೃತಿಯಲ್ಲಿ ಮಹತ್ವದ ಬದಲಾವಣೆಯಾಗಿದೆ. ಅಭಿವೃದ್ಧಿ, ಉತ್ತಮ ಆಡಳಿತ ಹಾಗೂ ಸಾಮಾಜಿಕ ನ್ಯಾಯಕ್ಕೆ ಆದ್ಯತೆ ನೀಡಲಾಗುತ್ತಿದೆ ಎಂದರು.

ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆ ಹಾಗೂ ಆಯುಷ್ಮಾನ್ ಭಾರತ್ ಯೋಜನೆಗಳ ಮೂಲಕ ಕೋಟ್ಯಂತರ ಜನರಿಗೆ ಆರೋಗ್ಯ ಸೇವೆ ಒದಗಿಸಲಾಗುತ್ತಿದೆ. 75 ವರ್ಷ ಮೇಲ್ಪಟ್ಟ ಎಲ್ಲರಿಗೂ 5 ಲಕ್ಷದವರೆಗೆ ಆರೋಗ್ಯ ಸೌಲಭ್ಯ ಕಲ್ಪಿಸಲಾಗಿದೆ. ದೇಶದಲ್ಲಿ ವೈದ್ಯಕೀಯ ಕಾಲೇಜುಗಳು, ವೈದ್ಯಕೀಯ ಮತ್ತು ಸ್ನಾತಕೋತ್ತರ ಸೀಟುಗಳ ಸಂಖ್ಯೆಯೂ ಹೆಚ್ಚಾಗಿದೆ. ಹೆಣ್ಣು ಮಕ್ಕಳಿಗೆ ಎಚ್‌ಪಿವಿ ಲಸಿಕೆ ನೀಡುವ ಕಾರ್ಯಕ್ರಮಕ್ಕೂ ಚಾಲನೆ ನೀಡಲಾಗಿದೆ ಎಂದು ವಿವರಿಸಿದರು.

**ಬಡವರು, ಯುವಕರು, ರೈತರು, ಮಹಿಳೆಯರಿಗೆ ಆದ್ಯತೆ**

ಪ್ರಧಾನಿ ಮೋದಿ ಅವರ 'ಜ್ಞಾನ' (GYAN) ಮಂತ್ರದಲ್ಲಿ ಬಡವರು, ಯುವಕರು, ಅನ್ನದಾತರು




ಹಾಗೂ ನಾರಿಶಕ್ತಿಗೆ ಆದ್ಯತೆ ನೀಡಲಾಗಿದೆ. ಬಡತನ ನಿವಾರಣೆ, ಯುವಕರಿಗೆ ಉದ್ಯೋಗ ಹಾಗೂ ಅವಕಾಶ, ರೈತರ ಸಬಲೀಕರಣ ಮತ್ತು ಮಹಿಳಾ ಸಬಲೀಕರಣಕ್ಕೆ ಕೇಂದ್ರ ಸರ್ಕಾರ ಹಲವು ಕ್ರಮಗಳನ್ನು ಕೈಗೊಂಡಿದೆ ಎಂದು ನಡ್ಡಾ ಹೇಳಿದರು.

**ಸೇವಾ ಸಂಕಲ್ಪ ಅಭಿಯಾನ:** 'ಸೇವಾ, ಸುಶಾಸನ ಮತ್ತು ಗರೀಬ್ ಕಲ್ಯಾಣ'ದ ಆಶಯದೊಂದಿಗೆ ದೇಶಾದ್ಯಂತ ಸೇವಾ ಸಂಕಲ್ಪ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಸ್ವಚ್ಛತಾ ಕಾರ್ಯ, ರಕ್ತದಾನ ಹಾಗೂ ಆರೋಗ್ಯ ತಪಾಸಣಾ ಶಿಬಿರಗಳು ಸೇರಿದಂತೆ ಹಲವು ಸೇವಾ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಭಾಷಣ ಮತ್ತು ಚರ್ಚಾ ಸ್ಪರ್ಧೆಗಳು, ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರ ಸನ್ಮಾನ, ಬೈಕ್ ರ‍್ಯಾಲಿ, ಪಾದಯಾತ್ರೆ ಹಾಗೂ 'ವಿಕಸಿತ ಭಾರತ'ಕ್ಕಾಗಿ ಸಂಕಲ್ಪ ಕಾರ್ಯಕ್ರಮಗಳನ್ನು ನಡೆಸಲಾಗುವುದು ಎಂದರು.

2047ರ ವೇಳೆಗೆ ವಿಕಸಿತ ಭಾರತ ನಿರ್ಮಾಣಕ್ಕೆ ಪ್ರತಿಯೊಬ್ಬ ನಾಗರಿಕರೂ ದೇಶಕ್ಕಾಗಿ ದುಡಿಯುವ ಸಂಕಲ್ಪ ಕೈಗೊಳ್ಳಲಿದ್ದಾರೆ. ದೇಶಾದ್ಯಂತ ಕೋಟ್ಯಂತರ ಬಿಜೆಪಿ ಕಾರ್ಯಕರ್ತರು ಅಭಿಯಾನದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

**ವಡಾನಗರ–ವಾರಾಣಸಿ ಸೇವಾ ಯಾತ್ರೆ:** ಪ್ರಧಾನಿ ನರೇಂದ್ರ ಮೋದಿ ಅವರ 25 ವರ್ಷಗಳ ಸಾರ್ವಜನಿಕ ಸೇವೆಯನ್ನು ಸ್ಮರಿಸುವ ಉದ್ದೇಶದಿಂದ ಗುಜರಾತ್‌ನ ವಡಾನಗರದಿಂದ ಉತ್ತರ ಪ್ರದೇಶದ ವಾರಾಣಸಿವರೆಗೆ ಸೇವಾ ಯಾತ್ರೆ ಆಯೋಜಿಸಲಾಗುವುದು. ವಡಾನಗರ ಮೋದಿ ಅವರ ಜನ್ಮಸ್ಥಳವಾಗಿದ್ದು, ವಾರಾಣಸಿ ಅವರ ಲೋಕಸಭಾ ಕ್ಷೇತ್ರವಾಗಿದೆ. ಸರ್ಕಾರದ ಯೋಜನೆಗಳ ಸೌಲಭ್ಯಗಳು ಕೊನೆಯ ಫಲಾನುಭವಿಗೂ ತಲುಪಿರುವ ಕುರಿತು ಈ ಯಾತ್ರೆಯಲ್ಲಿ ಮಾಹಿತಿ ಸಂಗ್ರಹಿಸಲಾಗುವುದು ಎಂದರು.

**ಬ್ಲಾಕ್ ಮಟ್ಟದಲ್ಲಿ ಸೇವಾಸೇತು:** 'ಸೇವಾಸೇತು' ಅಭಿಯಾನದಡಿ ಬ್ಲಾಕ್ ಹಾಗೂ ವಾರ್ಡ್ ಮಟ್ಟದಲ್ಲಿ ಶಿಬಿರಗಳನ್ನು ಆಯೋಜಿಸಿ ಫಲಾನುಭವಿಗಳ ನೋಂದಣಿ ನಡೆಸಲಾಗುವುದು. 'ಸೇವಾ ಕಿ ರಂಗ್' ಕಾರ್ಯಕ್ರಮದಡಿ ನವೀನ ಆಲೋಚನೆ ಹಾಗೂ ಆವಿಷ್ಕಾರ ಸ್ಪರ್ಧೆಗಳನ್ನು ನಡೆಸಿ ಯುವಕರು, ವಿದ್ಯಾರ್ಥಿಗಳು, ಉದ್ಯೋಗಿಗಳು ಮತ್ತು ನವೋದ್ಯಮಿಗಳನ್ನು ಒಳಗೊಳ್ಳಲಾಗುವುದು ಎಂದರು.

'ಸುಶಾಸನ ಸಂವಾದ'ದಲ್ಲಿ ಉತ್ತಮ ಆಡಳಿತ, ಪಾರದರ್ಶಕತೆ ಹಾಗೂ ಸಾರ್ವಜನಿಕ ಕಲ್ಯಾಣದ ಕುರಿತು ಚರ್ಚೆ ನಡೆಯಲಿದೆ. ದೇಶಾದ್ಯಂತ 12 ಪ್ರಮುಖ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದ್ದು, ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಸಕ್ರಿಯವಾಗಿ ಭಾಗವಹಿಸಲಿದ್ದಾರೆ ಎಂದು ನಡ್ಡಾ ತಿಳಿಸಿದರು.

2029ರ ಚುನಾವಣೆ ಮಾತ್ರ ಗುರಿಯಾಗಿಟ್ಟುಕೊಂಡು ಬಿಜೆಪಿ ಕಾರ್ಯನಿರ್ವಹಿಸುತ್ತಿಲ್ಲ. 2047ರ ವಿಕಸಿತ ಭಾರತದ ಗುರಿಯನ್ನು ಗಮನದಲ್ಲಿಟ್ಟುಕೊಂಡು ಕೆಲಸ ಮಾಡಲಾಗುತ್ತಿದೆ. ಪ್ರಧಾನಿ ಮೋದಿ ಅವರ ನೇತೃತ್ವದಲ್ಲಿ ದೇಶ ಜಾಗತಿಕ ಮಟ್ಟದಲ್ಲಿ ಹಲವು ಬದಲಾವಣೆಗಳನ್ನು ಕಂಡಿದ್ದು, 'ಹೇಳಿದ್ದನ್ನೇ ಮಾಡುವ, ಮಾಡಿದ್ದನ್ನೇ ಹೇಳುವ' ರಾಜಕೀಯ ಸಂಸ್ಕೃತಿಗೆ ಬಿಜೆಪಿ ಆದ್ಯತೆ ನೀಡುತ್ತಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಡಾ. ಸಿ.ಎನ್. ಅಶ್ವತ್ಥನಾರಾಯಣ, ಸಂಸದರಾದ ಪಿ.ಸಿ. ಮೋಹನ್, ಡಾ. ಮಂಜುನಾಥ್, ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಸೇರಿದಂತೆ ಪಕ್ಷದ ಪ್ರಮುಖರು ಉಪಸ್ಥಿತರಿದ್ದರು.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ವಿಕ್ರಮ ವಾಹಿನಿ

# ಮಸೂದ್ ಅಜರ್ ಬಹುಮಾನ ಹೆಚ್ಚಳಕ್ಕೆ ಭಾರತ ಕಿಡಿ

● ವಿಕ್ರಮ ವಾಹಿನಿ | ನವದೆಹಲಿ

ಜೈಷ್–ಎ–ಮೊಹಮ್ಮದ್ ಮುಖ್ಯಸ್ಥ ಹಾಗೂ ಜಾಗತಿಕ ಭಯೋತ್ಪಾದಕ ಮಸೂದ್ ಅಜರ್‌ನ ಬಂಧನಕ್ಕೆ ನೆರವಾಗುವವರಿಗೆ ನೀಡುವ ಬಹುಮಾನವನ್ನು 20 ಲಕ್ಷದಿಂದ 70 ಲಕ್ಷ ಪಾಕಿಸ್ತಾನಿ ರೂಪಾಯಿಗೆ ಹೆಚ್ಚಿಸಿರುವ ಪಾಕಿಸ್ತಾನದ ಕ್ರಮವನ್ನು ಭಾರತ ತೀವ್ರವಾಗಿ ಟೀಕಿಸಿದೆ.

ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಪಾಕಿಸ್ತಾನದ ಇಂತಹ ಕ್ರಮಗಳು ಜಗತ್ತಿನ ಕಣ್ಣಿಗೆ ಮಣ್ಣೆರಚುವ 'ಗಿಮಿಕ್' ಮಾತ್ರ. ಭಯೋತ್ಪಾದನೆಯನ್ನು ಪೋಷಿಸುವ ರಾಷ್ಟ್ರವು ಇಂತಹ ಪ್ರಕಟಣೆಗಳ ಬದಲಿಗೆ ಉಗ್ರರ ವಿರುದ್ಧ ನೈಜ ಹಾಗೂ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪಾಕಿಸ್ತಾನದ ಫೆಡರಲ್ ಇನ್ವೆಸ್ಟಿಗೇಷನ್ ಏಜೆನ್ಸಿ ಬಿಡುಗಡೆ ಮಾಡಿರುವ 2026ರ ಪ್ರಮುಖ ಉಗ್ರರ ಪಟ್ಟಿಯಲ್ಲಿ ಅಜರ್ ಹೆಸರನ್ನು ಸೇರಿಸಲಾಗಿದೆ. ಆತ ಅಫ್ಘಾನಿಸ್ತಾನದಲ್ಲಿದ್ದಾನೆ ಎಂದು ಪಾಕಿಸ್ತಾನ ಹೇಳುತ್ತಿದ್ದರೂ, ಅಜರ್ ಪಾಕಿಸ್ತಾನದಲ್ಲೇ ಆಶ್ರಯ ಪಡೆದಿದ್ದಾನೆ ಎಂಬುದು ಭಾರತದ ನಿಲುವಾಗಿದೆ.

**ಭಾರತಕ್ಕೆ ಮೋಸ್ಟ್ ವಾಂಟೆಡ್**

2001ರ ಸಂಸತ್ ದಾಳಿ, 2016ರ ಪಠಾಣ್‌ಕೋಟ್ ವಾಯುನೆಲೆ ದಾಳಿ ಹಾಗೂ 2019ರ ಪುಲ್ವಾಮಾ ದಾಳಿ ಸೇರಿದಂತೆ ಹಲವು ಭಯೋತ್ಪಾದಕ ಕೃತ್ಯಗಳ ಹಿನ್ನೆಲೆಯಲ್ಲಿ ಮಸೂದ್ ಅಜರ್ ಭಾರತಕ್ಕೆ ಮೋಸ್ಟ್ ವಾಂಟೆಡ್ ಉಗ್ರನಾಗಿದ್ದಾನೆ. 1999ರ ಐಸಿ–814 ವಿಮಾನ ಅಪಹರಣದ ವೇಳೆ ಪ್ರಯಾಣಿಕರ ಬಿಡುಗಡೆಗಾಗಿ ಭಾರತ ಸರ್ಕಾರ ಆತನನ್ನು ಜೈಲಿನಿಂದ ಬಿಡುಗಡೆ ಮಾಡಿತ್ತು. ಬಳಿಕ ವಿಶ್ವಸಂಸ್ಥೆ ಆತನನ್ನು ಜಾಗತಿಕ ಭಯೋತ್ಪಾದಕ ಎಂದು ಘೋಷಿಸಿದೆ.

# ಸಂಜು ಸಿಡಿಲಬ್ಬರ; ಅಫ್ಘಾನ್ ವಿರುದ್ಧ ಭಾರತಕ್ಕೆ ಸರಣಿ ಜಯ



● ವಿಕ್ರಮ ವಾಹಿನಿ | ನವದೆಹಲಿ

ಸಂಜು ಸ್ಯಾಮ್ಸನ್, ಅಭಿಷೇಕ್ ಶರ್ಮಾ ಹಾಗೂ ಇಶಾನ್ ಕಿಶನ್ ಅವರ ಸ್ಫೋಟಕ ಬ್ಯಾಟಿಂಗ್ ನೆರವಿನಿಂದ ಭಾರತ ತಂಡ ಅಫ್ಘಾನಿಸ್ತಾನ ವಿರುದ್ಧದ 2ನೇ ಟಿ20 ಪಂದ್ಯದಲ್ಲಿ 7 ವಿಕೆಟ್‌ಗಳ ಭರ್ಜರಿ ಗೆಲುವು ದಾಖಲಿಸಿದೆ. ಈ ಜಯದೊಂದಿಗೆ ಭಾರತ 3 ಪಂದ್ಯಗಳ ಸರಣಿಯನ್ನು ಇನ್ನೂ ಒಂದು ಪಂದ್ಯ ಬಾಕಿ ಇರುವಂತೆಯೇ 2–0 ಅಂತರದಲ್ಲಿ ವಶಪಡಿಸಿಕೊಂಡಿದೆ.

ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಅಫ್ಘಾನಿಸ್ತಾನ 20 ಓವರ್‌ಗಳಲ್ಲಿ 8 ವಿಕೆಟ್ ಕಳೆದುಕೊಂಡು 159 ರನ್ ಗಳಿಸಿತು. ಗುರಿ ಬೆನ್ನಟ್ಟಿದ ಭಾರತ 14.5 ಓವರ್‌ಗಳಲ್ಲಿ 3 ವಿಕೆಟ್‌ಗೆ 163 ರನ್ ಗಳಿಸಿ ಗೆಲುವಿನ ನಗೆ ಬೀರಿತು.

ಆರಂಭದಿಂದಲೇ ಆಕ್ರಮಣಕಾರಿ ಆಟವಾಡಿದ ಸಂಜು ಸ್ಯಾಮ್ಸನ್ ಕೇವಲ 22 ಎಸೆತಗಳಲ್ಲಿ 7 ಬೌಂಡರಿ ಹಾಗೂ 4 ಸಿಕ್ಸರ್ ಸಹಿತ 57 ರನ್ ಸಿಡಿಸಿದರು. ಅಭಿಷೇಕ್ ಶರ್ಮಾ 19 ಎಸೆತಗಳಲ್ಲಿ 39 ರನ್ ಗಳಿಸಿ ಉತ್ತಮ ಆರಂಭ ಒದಗಿಸಿದರು.

ನಂತರ ಇಶಾನ್ ಕಿಶನ್ ಜವಾಬ್ದಾರಿಯುತ ಬ್ಯಾಟಿಂಗ್ ನಡೆಸಿ 23 ಎಸೆತಗಳಲ್ಲಿ ಅಜೇಯ 38 ರನ್ ಗಳಿಸಿದರು. ತಿಲಕ್ ವರ್ಮಾ ಅಜೇಯ 15 ರನ್ ಗಳಿಸಿದರು. ನಾಯಕ ಶ್ರೇಯಸ್ ಅಯ್ಯರ್ 11 ರನ್ ಗಳಿಸಿ ಔಟಾದರು.

ಇದಕ್ಕೂ ಮುನ್ನ ಅಫ್ಘಾನಿಸ್ತಾನ ಆರಂಭದಲ್ಲಿ ನಿಧಾನಗತಿಯ ಬ್ಯಾಟಿಂಗ್‌ನಿಂದ ಸಂಕಷ್ಟಕ್ಕೆ ಸಿಲುಕಿತ್ತು. ಆದರೆ ಮೊಹಮ್ಮದ್ ನಬಿ ಹಾಗೂ ರಶೀದ್ ಖಾನ್ ಅವರ ಅಂತಿಮ ಹಂತದ ಸ್ಫೋಟಕ ಬ್ಯಾಟಿಂಗ್ ನೆರವಿನಿಂದ ತಂಡ 159 ರನ್‌ಗಳ ಸ್ಪರ್ಧಾತ್ಮಕ ಮೊತ್ತ ಕಲೆಹಾಕಿತು.

**ಅಂತಿಮ ಪಂದ್ಯ ಸೆ.17ಕ್ಕೆ:** ಸರಣಿಯ 3ನೇ ಹಾಗೂ ಅಂತಿಮ ಟಿ20 ಪಂದ್ಯ ಸೆ.17ರಂದು ಇದೇ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆಯಲಿದೆ.

# ಸರ್.ಎಂ.ವಿಶ್ವೇಶ್ವರಯ್ಯ ಆದರ್ಶ ಜೀವನ ಅನುಸರಿಸಿ

## ■ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದಿಂದ 165ನೇ ಜನ್ಮದಿನಾಚರಣೆ ■

● ವಿಕ್ರಮ ವಾಹಿನಿ | ಬೆಂಗಳೂರು

ಭಾರತರತ್ನ ಸರ್.ಎಂ. ವಿಶ್ವೇಶ್ವರಯ್ಯ ಅವರ ಸರಳತೆ, ಶಿಸ್ತು, ಸಮಯಪ್ರಜ್ಞೆ ಹಾಗೂ ದೇಶ ಸೇವೆಯ ಆದರ್ಶಗಳನ್ನು ಇಂದಿನ ಪೀಳಿಗೆ ಅನುಸರಿಸಬೇಕು ಎಂದು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಅಧ್ಯಕ್ಷ ಎಸ್. ರಘುನಾಥ್ ಹೇಳಿದರು.

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಗಾಯತ್ರಿ ಭವನದಲ್ಲಿ ಆಯೋಜಿಸಿದ್ದ ಸರ್.ಎಂ. ವಿಶ್ವೇಶ್ವರಯ್ಯ ಅವರ 165ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸರ್.ಎಂ.ವಿ. ಅವರು ತಮ್ಮ ಜ್ಞಾನ, ಕೌಶಲ್ಯ ಹಾಗೂ ದೂರದೃಷ್ಟಿಯಿಂದ ರಾಜ್ಯ ಮತ್ತು ರಾಷ್ಟ್ರದ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿದ್ದಾರೆ. ಅವರ ಹಾಕಿಕೊಟ್ಟ ಮಾರ್ಗದರ್ಶನದಲ್ಲಿ ಎಲ್ಲರೂ ಮುನ್ನಡೆಯಬೇಕು ಎಂದರು.

ಕಾರ್ಯಕ್ರಮದಲ್ಲಿ ಹಾಸ್ಯ ಸಾಹಿತಿ ವೈ.ವಿ. ಗುಂಡೂರಾವ್ ಮಾತನಾಡಿ, ಸಮಯಪಾಲನೆ ಮತ್ತು ಶಿಸ್ತಿಗೆ ಮತ್ತೊಂದು ಹೆಸರೇ ಸರ್.ಎಂ. ವಿಶ್ವೇಶ್ವರಯ್ಯ.



ನೀರಾವರಿ ಕ್ಷೇತ್ರದಲ್ಲಿ ಅಪಾರ ಜ್ಞಾನ ಹೊಂದಿದ್ದ ಅವರು ಪ್ರವಾಹ ನಿಯಂತ್ರಣ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ತಮ್ಮ ಪರಿಣತಿ ಮೆರೆದಿದ್ದರು ಎಂದು ಹೇಳಿದರು.

ಮುದ್ದೇನಹಳ್ಳಿಯಲ್ಲಿ ಜನಿಸಿದ ವಿಶ್ವೇಶ್ವರಯ್ಯ ಅವರು ಬೀದಿ ದೀಪದ ಬೆಳಕಿನಲ್ಲಿ ಓದಿ, ವಿಶ್ವವೇ ಗುರುತಿಸುವ ಶ್ರೇಷ್ಠ ಎಂಜಿನಿಯರ್ ಆಗಿ ಬೆಳೆದರು. ಯಾವುದೇ ಕೆಲಸವನ್ನು ಕೀಳಾಗಿ ಕಾಣದೆ ಶ್ರದ್ಧೆ ಮತ್ತು ಬದ್ಧತೆಯಿಂದ ನಿರ್ವಹಿಸಿದರೆ ಯಶಸ್ಸು ಸಾಧ್ಯ ಎಂಬುದನ್ನು ತಮ್ಮ ಜೀವನದ ಮೂಲಕ ತೋರಿಸಿಕೊಟ್ಟರು ಎಂದರು.

ಮೈಸೂರು ಸಂಸ್ಥಾನದ ದಿವಾನರಾಗಿ ಆರು ವರ್ಷಗಳ ಕಾಲ ಸೇವೆ ಸಲ್ಲಿಸಿದ ಸರ್.ಎಂ.ವಿ. ಅವರು ರಾಜ್ಯದ ಅಭಿವೃದ್ಧಿಗೆ ಹಲವು ಮಹತ್ವದ ಯೋಜನೆಗಳನ್ನು ರೂಪಿಸಿದರು. ಕೆಆರ್‌ಎಸ್ ಅಣೆಕಟ್ಟು ನಿರ್ಮಾಣದ ಮೂಲಕ ರೈತರ ಬದುಕಿಗೆ ಬೆಳಕು ನೀಡಿದರು. ವಿಜ್ಞಾನ, ತಂತ್ರಜ್ಞಾನ, ನೀರಾವರಿ ಹಾಗೂ ಶಿಕ್ಷಣ ಕ್ಷೇತ್ರಗಳ ಅಭಿವೃದ್ಧಿಗೂ ಮಹತ್ವದ ಕೊಡುಗೆ ನೀಡಿದರು ಎಂದು ಗುಂಡೂರಾವ್ ಸ್ಮರಿಸಿದರು.

ಸರ್.ಎಂ.ವಿ. ಅವರ ಜನ್ಮದಿನವನ್ನು ದೇಶಾದ್ಯಂತ ಅಭಿಯಂತರ ದಿನವಾಗಿ ಆಚರಿಸಲಾಗುತ್ತಿದೆ. ಸರ್ಕಾರಿ ಸೌಲಭ್ಯಗಳನ್ನು ವೈಯಕ್ತಿಕ ಬಳಕೆಗೆ ಬಳಸದೆ ಕರ್ತವ್ಯಕ್ಕೆ ಮಾತ್ರ ಸೀಮಿತಗೊಳಿಸಿದ್ದ ಅವರ ಪ್ರಾಮಾಣಿಕತೆ ಇಂದಿನ ಸಮಾಜಕ್ಕೆ ಮಾದರಿಯಾಗಿದೆ ಎಂದು ಹೇಳಿದರು.

ಸರ್.ಎಂ.ವಿ. ಅವರ ಭಾವಚಿತ್ರಕ್ಕೆ ಎಸ್. ರಘುನಾಥ್, ವೈ.ವಿ. ಗುಂಡೂರಾವ್ ಹಾಗೂ ಪ್ರಧಾನ ಕಾರ್ಯದರ್ಶಿ ಡಾ. ಎನ್. ಸತ್ಯಪ್ರಕಾಶ್ ಪುಷ್ಪನಮನ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಮಾಜಿ ಸದಸ್ಯ ಎಸ್.ಆರ್. ಲೀಲಾ, ಜಿಲ್ಲಾ ಪ್ರತಿನಿಧಿ ಪಿ.ಆರ್. ಪ್ರಕಾಶ್, ಚಿದಾನಂದ್ ಸೇರಿದಂತೆ ವಿಪ್ರ ಮುಖಂಡರು ಉಪಸ್ಥಿತರಿದ್ದರು.

# ಹರಿಪ್ರಸಾದ್ ಅಸಮಾಧಾನಕ್ಕೆ ಸಿಎಂ ಸ್ಪಷ್ಟನೆ

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯ ಸರ್ಕಾರದ 100 ದಿನಗಳ ಸಂಭ್ರಮಾಚರಣೆ ಕಾರ್ಯಕ್ರಮಕ್ಕೆ ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಅವರಿಗೆ ಆಹ್ವಾನ ನೀಡಿಲ್ಲ ಎಂಬ ಅಸಮಾಧಾನ ಕಾಂಗ್ರೆಸ್‌ನಲ್ಲಿ ಚರ್ಚೆಗೆ ಗ್ರಾಸವಾಗಿರುವ ಬೆನ್ನಲ್ಲೇ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟನೆ ನೀಡಿದ್ದಾರೆ. ಕಾರ್ಯಕ್ರಮಕ್ಕೆ ಪಕ್ಷದ ಅಧ್ಯಕ್ಷರು ಸೇರಿದಂತೆ ಎಲ್ಲ ಶಾಸಕರಿಗೂ ಆಹ್ವಾನ ನೀಡಲಾಗಿತ್ತು. ಶಿಷ್ಟಾಚಾರದ ಹಿನ್ನೆಲೆಯಲ್ಲಿ ವೇದಿಕೆಯಲ್ಲಿ ಕೆಲವರಿಗೆ ಅವಕಾಶ ನೀಡಲು ಸಾಧ್ಯವಾಗಲಿಲ್ಲ ಎಂದು ಅವರು ತಿಳಿಸಿದ್ದಾರೆ.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ಸರ್ಕಾರದ 100 ದಿನಗಳ ಕಾರ್ಯಕ್ರಮಕ್ಕೆ ಆಹ್ವಾನ ನೀಡದಿರುವ ಬಗ್ಗೆ ಹರಿಪ್ರಸಾದ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ. ತಾವು ಪಕ್ಷದ ರಾಜ್ಯಾಧ್ಯಕ್ಷರಾಗಿದ್ದು, ವಿಧಾನಪರಿಷತ್ ಸದಸ್ಯರೂ ಆಗಿದ್ದರೂ ಕನಿಷ್ಠ ದೂರವಾಣಿ ಕರೆ ಮಾಡಿ ಆಹ್ವಾನಿಸಿಲ್ಲ. ಶಿಷ್ಟಾಚಾರಕ್ಕಾದರೂ ವೇದಿಕೆಯಲ್ಲಿ ತಮ್ಮನ್ನು ಗುರುತಿಸಬಹುದಿತ್ತು ಎಂದು ಅವರು ಆಪ್ತರ



ಬಳಿ ಬೇಸರ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ. ಈ ವಿಚಾರವನ್ನು ಕಾಂಗ್ರೆಸ್ ಹೈಕಮಾಂಡ್ ನಾಯಕರ ಗಮನಕ್ಕೂ ತಂದಿದ್ದಾರೆ ಎಂಬ ವರದಿಗಳು ಕೇಳಿಬಂದಿವೆ.

ಈ ಕುರಿತು ಪ್ರತಿಕ್ರಿಯಿಸಿದ ಡಿ.ಕೆ.ಶಿವಕುಮಾರ್, "ಹರಿಪ್ರಸಾದ್ ಅವರಿಗೆ ಆಹ್ವಾನ ನೀಡಿಲ್ಲ ಎಂದು ಯಾರು ಹೇಳಿದರು? ಅವರೇ ಹಾಗೆ ಹೇಳಿದ್ದಾರೆಯೇ? ಸರ್ಕಾರವು ಎಲ್ಲ ಶಾಸಕರು, ವಿರೋಧ ಪಕ್ಷದ ಶಾಸಕರು ಸೇರಿದಂತೆ ಎಲ್ಲರಿಗೂ ಆಹ್ವಾನ ನೀಡುತ್ತದೆ" ಎಂದು ಹೇಳಿದರು.

ಪಕ್ಷದ ಅಧ್ಯಕ್ಷರ ವಿಚಾರದಲ್ಲಿ ಪಕ್ಷ ನೀಡುವ ನಿರ್ದೇಶನಗಳಂತೆ ಸರ್ಕಾರ ಮತ್ತು ಪಕ್ಷ ಒಟ್ಟಾಗಿ ಕೆಲಸ ಮಾಡುತ್ತವೆ. ಎಲ್ಲ ಪದಾಧಿಕಾರಿಗಳು ಹಾಗೂ ಪ್ರಮುಖರಿಗೆ ಕಾರ್ಯಕ್ರಮಕ್ಕೆ ಆಹ್ವಾನ ಕಳುಹಿಸಲಾಗಿದೆ ಎಂದು ಅವರು ಸ್ಪಷ್ಟಪಡಿಸಿದರು.

ವೇದಿಕೆಯಲ್ಲಿ ಅವಕಾಶ ನೀಡದಿರುವುದಕ್ಕೆ ಪ್ರೋಟೋಕಾಲ್ ಕಾರಣ ಹರಿಪ್ರಸಾದ್ ಅವರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಲಾಗಿತ್ತು. ಆದರೆ ವೇದಿಕೆಯಲ್ಲಿ ಅವರನ್ನು ಕೂರಿಸದಿರುವುದು ಪ್ರೋಟೋಕಾಲ್‌ಗೆ ಸಂಬಂಧಿಸಿದ ವಿಚಾರ ಎಂದು ಮುಖ್ಯಮಂತ್ರಿ ತಿಳಿಸಿದರು.

ಸರ್ಕಾರದ ಕಾರ್ಯಕ್ರಮವಾಗಿರುವುದರಿಂದ ಆಹ್ವಾನಿತ ಎಲ್ಲರಿಗೂ ವೇದಿಕೆಯಲ್ಲಿ ಸ್ಥಾನ ಕಲ್ಪಿಸಲು ಸಾಧ್ಯವಿಲ್ಲ ಎಂದರು.

ಇದರ ಬೆನ್ನಲ್ಲೇ ಹರಿಪ್ರಸಾದ್ ಅವರ ಅಸಮಾಧಾನ ಹಾಗೂ ಅವರು ಹೈಕಮಾಂಡ್ ಮಟ್ಟದಲ್ಲಿ ವಿಷಯ ಪ್ರಸ್ತಾಪಿಸಿದ್ದಾರೆ ಎನ್ನಲಾಗುತ್ತಿರುವ ಬೆಳವಣಿಗೆ ಕಾಂಗ್ರೆಸ್‌ನೊಳಗಿನ ರಾಜಕೀಯ ಚರ್ಚೆಗೆ ಕಾರಣವಾಗಿದೆ.



ಮೂಡು ಶೆಡ್ಡೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಹಿಳಾ ಮತ್ತು ಮಕ್ಕಳ ಪೂರಕ ಪೌಷ್ಟಿಕ ಆಹಾರ ತಯಾರಿಕಾ ಕೇಂದ್ರಕ್ಕೆ ದಕ್ಷಿಣ ಕನ್ನಡ ಜಿಲ್ಲಾ ಆಹಾರ ಸುರಕ್ಷತಾ ಅಂಕಿತ ಅಧಿಕಾರಿ ಡಾ. ಪ್ರವೀಣ್ ಕುಮಾರ್ ಸಿಹೆಚ್ ಭೇಟಿ ನೀಡಿ, ಅಂಗನವಾಡಿ ಮಕ್ಕಳಿಗೆ ನೀಡುವ ಪೌಷ್ಟಿಕ ಆಹಾರ ತಯಾರಿಕೆ ಹಾಗೂ ಶುಚಿತ್ವ ಕ್ರಮಗಳನ್ನು ಪರಿಶೀಲಿಸಿದರು. ಈ ವೇಳೆ ಪುಷ್ಠಿ, ಮಿಲ್ಲೆಟ್ ಲಡ್ಡು ಪೌಡರ್ ಹಾಗೂ ಸಾಂಬಾರ್ ಪೌಡರ್‌ಗಳ ಮಾದರಿಗಳನ್ನು ಸಂಗ್ರಹಿಸಿ ಆಹಾರ ಪ್ರಯೋಗಾಲಯಕ್ಕೆ ಕಳುಹಿಸಲಾಯಿತು.

# ನಾನು ನಟನೆಯಿಂದ ನಿವೃತ್ತಿ ಹೊಂದುತ್ತಿಲ್ಲ: ಅಮಿತಾಭ್ ಬಚ್ಚನ್ ಸ್ಪಷ್ಟನೆ

**ನಟನೆಯಿಂದ ನಿವೃತ್ತಿಯಾಗುವ ಯಾವುದೇ ಉದ್ದೇಶವಿಲ್ಲ ಎಂದು ಅಮಿತಾಭ್ ಬಚ್ಚನ್ ಸ್ಪಷ್ಟಪಡಿಸಿದ್ದು, ತಮ್ಮ ಬ್ಲಾಗ್‌ನ 'ನಿವೃತ್ತಿ' ಹೇಳಿಕೆಯನ್ನು ತಪ್ಪಾಗಿ ಅರ್ಥೈಸಲಾಗಿದೆ ಎಂದು ತಿಳಿಸಿದ್ದಾರೆ.**

● ವಿಕ್ರಮ ವಾಹಿನಿ | ಮುಂಬೈ

ತಾವು ನಟನೆಯಿಂದ ನಿವೃತ್ತಿ ಹೊಂದುವ ಯಾವುದೇ ಯೋಜನೆ ಇಲ್ಲ ಎಂದು ಬಾಲಿವುಡ್ ಹಿರಿಯ ನಟ ಅಮಿತಾಭ್ ಬಚ್ಚನ್ ಸ್ಪಷ್ಟಪಡಿಸಿದ್ದಾರೆ. ತಮ್ಮ ವೈಯಕ್ತಿಕ ಬ್ಲಾಗ್‌ನಲ್ಲಿ ಬರೆದಿದ್ದ 'ತಡವಾಯಿತು, ನಿವೃತ್ತಿ ಹೊಂದುವ ಸಮಯ' ಎಂಬ ಹೇಳಿಕೆಯನ್ನು ಕೆಲವರು ವೃತ್ತಿಜೀವನಕ್ಕೆ ವಿದಾಯ ಹೇಳುವ ಸೂಚನೆ ಎಂದು ಅರ್ಥೈಸಿದ ಹಿನ್ನೆಲೆಯಲ್ಲಿ ಅವರು ಸ್ಪಷ್ಟನೆ ನೀಡಿದ್ದಾರೆ.

ಸೋಮವಾರ ರಾತ್ರಿ ಬ್ಲಾಗ್‌ನಲ್ಲಿ ಈ ಕುರಿತು ಬರೆದಿರುವ ಅಮಿತಾಭ್ ಬಚ್ಚನ್, 'ನಿವೃತ್ತಿ' ಎಂಬ ಪದವನ್ನು ನಟನೆಯಿಂದ ಹಿಂದೆ ಸರಿಯುವ ಅರ್ಥದಲ್ಲಿ ಬಳಸಿರಲಿಲ್ಲ. ತಡವಾಗಿದ್ದರಿಂದ ಮಲಗಲು ತೆರಳುವ ಸಮಯ ಎಂಬ ಅರ್ಥದಲ್ಲಿ ಆ ಪದ ಬಳಸಿದ್ದಾಗಿ ತಿಳಿಸಿದ್ದಾರೆ.

ಹಿರಿಯ ನಟರ ಹಿಂದಿನ ಬ್ಲಾಗ್ ಬರಹವನ್ನು ಕೆಲವರು ತಪ್ಪಾಗಿ ವ್ಯಾಖ್ಯಾನಿಸಿ, ಅವರು ನಟನಾ ವೃತ್ತಿಗೆ ವಿದಾಯ ಹೇಳಲು ಮುಂದಾಗಿದ್ದಾರೆ ಎಂಬ ಊಹಾಪೋಹಗಳನ್ನು ಹರಡಿದ್ದರು. ತಮ್ಮ ಬರಹಗಳನ್ನು ಕೆಲವೊಮ್ಮೆ ತಪ್ಪಾಗಿ ಅರ್ಥೈಸಿ ವರದಿ ಮಾಡಲಾಗುತ್ತದೆ ಎಂದು ಅಮಿತಾಭ್ ಬೇಸರ ವ್ಯಕ್ತಪಡಿಸಿದ್ದರು. ಇದೇ ವೇಳೆ ಬ್ಲಾಗ್‌ನ ಕೊನೆಯಲ್ಲಿ 'ನಾನು ನಿವೃತ್ತಿ ಹೊಂದುತ್ತೇನೆ' ಎಂಬ ರೀತಿಯ ಹೇಳಿಕೆ ನೀಡಿದ್ದರಿಂದ ವದಂತಿಗಳಿಗೆ ಮತ್ತಷ್ಟು ಬಲ ಸಿಕ್ಕಿತ್ತು.

**ಬಿಡುವಿಲ್ಲದ ಕೆಲಸದ ವೇಳಾಪಟ್ಟಿ**


83 ವರ್ಷದ ಅಮಿತಾಭ್ ಬಚ್ಚನ್ ಸದ್ಯವೂ ಬಿಡುವಿಲ್ಲದ ವೃತ್ತಿಜೀವನ ಮುಂದುವರಿಸಿದ್ದಾರೆ. ಸಿನಿಮಾಗಳಲ್ಲಿ ನಟಿಸುವುದರ ಜತೆಗೆ ಜನಪ್ರಿಯ ಕ್ವಿಜ್ ಕಾರ್ಯಕ್ರಮ 'ಕೌನ್ ಬನೇಗಾ ಕರೋಡ್‌ಪತಿ'ಯ 18ನೇ ಆವೃತ್ತಿಯನ್ನೂ ಅವರು ನಿರೂಪಿಸುತ್ತಿದ್ದಾರೆ. ಎರಡು ದಶಕಗಳಿಗೂ ಹೆಚ್ಚು ಕಾಲ ಈ ಕಾರ್ಯಕ್ರಮದೊಂದಿಗೆ ಅವರು ಗುರುತಿಸಿಕೊಂಡಿದ್ದಾರೆ.

ಇತ್ತೀಚೆಗೆ ತಮ್ಮ ಕೆಲಸದ ಒತ್ತಡದ ಬಗ್ಗೆಯೂ ಬ್ಲಾಗ್‌ನಲ್ಲಿ ಹಂಚಿಕೊಂಡಿದ್ದ ಅವರು, ಒಂದು ಸಂದರ್ಭದಲ್ಲಿ ಬೆಳಗ್ಗೆ 7ರಿಂದ ಮರುದಿನ ಬೆಳಗ್ಗೆ 7ರವರೆಗೆ ನಿರಂತರವಾಗಿ ಕೆಲಸ ಮಾಡಿದ್ದಾಗಿ ಹೇಳಿಕೊಂಡಿದ್ದರು. ಕಾರ್ಯಕ್ರಮದ ಪ್ರಸಾರದ ದಿನಾಂಕ ನಿಗದಿಯಾಗಿದ್ದರಿಂದ ಕೆಲಸವನ್ನು ಸಮಯಕ್ಕೆ ಪೂರ್ಣಗೊಳಿಸಬೇಕಾಗಿತ್ತು ಎಂದು ವಿವರಿಸಿದ್ದರು.

**ಮುಂದುವರಿಯಲಿದೆ ಸಿನಿಮಾ ಪಯಣ**

ನಟನಾ ವೃತ್ತಿಯಲ್ಲಿ ಅಮಿತಾಭ್ ಬಚ್ಚನ್ ಇತ್ತೀಚೆಗೆ ನಾಗ್ ಅಶ್ವಿನ್ ನಿರ್ದೇಶನದ 'ಕಲ್ಕಿ 2898 ಎಡಿ' ಚಿತ್ರದಲ್ಲಿ ಕಾಣಿಸಿಕೊಂಡಿದ್ದರು. ಚಿತ್ರದಲ್ಲಿ ಪ್ರಭಾಸ್, ದೀಪಿಕಾ ಪಡುಕೋಣೆ ಹಾಗೂ ಕಮಲ್ ಹಾಸನ್ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದರು.

ಹಿರಿಯ ನಟನ ಮುಂದಿನ ಸಿನಿಮಾಗಳಿಗಾಗಿ ಅಭಿಮಾನಿಗಳು ಹಾಗೂ ಚಿತ್ರಪ್ರೇಮಿಗಳು ಕಾತರದಿಂದ ಕಾಯುತ್ತಿದ್ದಾರೆ.



# ಢಾಕಾ ವಿವಿಯಲ್ಲಿ ಜಿನ್ನಾ ಫೋಟೋ; ವಿದ್ಯಾರ್ಥಿಗಳ ಆಕ್ರೋಶ

● ವಿಕ್ರಮ ವಾಹಿನಿ | ಢಾಕಾ

ಬಾಂಗ್ಲಾದೇಶದ ಢಾಕಾ ವಿಶ್ವವಿದ್ಯಾಲಯದ ಆಗಅಖಗ ಮ್ಯೂಸಿಯಂನಲ್ಲಿ ವಿಮೋಚನಾ ನಾಯಕ ಶೇಖ್ ಮುಜಿಬುರ್ ರೆಹಮಾನ್ ಅವರ ಭಾವಚಿತ್ರಗಳನ್ನು ತೆರವುಗೊಳಿಸಿ, ಪಾಕಿಸ್ತಾನದ ಸಂಸ್ಥಾಪಕ ಮಹಮ್ಮದ್ ಅಲಿ ಜಿನ್ನಾ ಅವರ ಚಿತ್ರಗಳನ್ನು ಪ್ರದರ್ಶಿಸಿರುವುದು ವಿವಾದಕ್ಕೆ ಕಾರಣವಾಗಿದೆ.

ನವೀಕರಣಗೊಂಡ ಮ್ಯೂಸಿಯಂನಲ್ಲಿ 1952ರ ಭಾಷಾ ಚಳವಳಿ, 1966ರ ಆರು ಅಂಶಗಳ ಚಳವಳಿ ಹಾಗೂ 1971ರ ಮಾರ್ಚ್ 7ರ ಮುಜಿಬುರ್ ರೆಹಮಾನ್ ಅವರ ಐತಿಹಾಸಿಕ ಭಾಷಣಕ್ಕೆ ಸಂಬಂಧಿಸಿದ ಚಿತ್ರಗಳನ್ನು ತೆಗೆದುಹಾಕಲಾಗಿದೆ ಎಂದು ಆರೋಪಿಸಲಾಗಿದೆ. ಅವುಗಳ ಬದಲಿಗೆ ಜಿನ್ನಾ ಅವರ ಕನಿಷ್ಠ ಮೂರು ಚಿತ್ರಗಳನ್ನು ಅಳವಡಿಸಲಾಗಿದೆ ಎನ್ನಲಾಗಿದೆ.

ಈ ಕ್ರಮವನ್ನು ವಿರೋಧಿಸಿ ವಿದ್ಯಾರ್ಥಿಗಳು ಆಕ್ರೋಶ ವ್ಯಕ್ತಪಡಿಸಿದ್ದು, ಜಿನ್ನಾ ಅವರ ಭಾವಚಿತ್ರಗಳನ್ನು ಹರಿದುಹಾಕಿದ ಘಟನೆಯೂ ನಡೆದಿದೆ ಎಂದು ವರದಿಯಾಗಿದೆ. ಆಗಅಖಗ ಮಂಡಳಿಯ ಕ್ರಮದ ಕುರಿತು ವಿಶ್ವವಿದ್ಯಾಲಯದಲ್ಲಿ ಚರ್ಚೆ ತೀವ್ರಗೊಂಡಿದೆ.

# ಚುನಾವಣೆ ಬಂದಾಗಲೇ ದೇಶಭಕ್ತಿ ನೆನಪಾಯಿತೇ?

● ವಿಕ್ರಮ ವಾಹಿನಿ | ಮಂಗಳೂರು

'ವಂದೇ ಮಾತರಂ' ಗೀತೆಯ ಎಲ್ಲ ಆರೂ ಚರಣಗಳನ್ನು ಹಾಡುವುದಕ್ಕೆ ನಮ್ಮ ಯಾವುದೇ ಅಭ್ಯಂತರವಿಲ್ಲ. ಆದರೆ ಹಲವು ವರ್ಷಗಳ ಕಾಲ ಅಧಿಕಾರದಲ್ಲಿದ್ದಾಗ ನೆನಪಾಗದ ದೇಶಭಕ್ತಿ ಚುನಾವಣೆ ಸಮೀಪಿಸುತ್ತಿದ್ದಂತೆ ರಾಜಕೀಯ ಲಾಭಕ್ಕಾಗಿ ಮುನ್ನೆಲೆಗೆ ಬರುತ್ತಿದೆಯೇ ಎಂದು ಆರೋಗ್ಯ ಸಚಿವ ಹಾಗೂ ವಿಧಾನಸಭೆ ಸ್ಪೀಕರ್ ಯು.ಟಿ. ಖಾದರ್ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.

ಮಂಗಳೂರಿನಲ್ಲಿ ಕೆಡಿಪಿ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶಕ್ಕೆ ಒಂದು ರಾಷ್ಟ್ರಧ್ವಜ ಹಾಗೂ ಒಂದು ರಾಷ್ಟ್ರಗೀತೆ ಇರುವಂತೆ 'ಜನಗಣಮನ' ನಮ್ಮ ರಾಷ್ಟ್ರಗೀತೆಯಾಗಿದೆ. ಮೊದಲು ಎಲ್ಲರೂ ರಾಷ್ಟ್ರಗೀತೆಗೆ ಗೌರವ ನೀಡಬೇಕು. ಸ್ವಾತಂತ್ರ್ಯ ಪೂರ್ವದಿಂದಲೂ 'ವಂದೇ ಮಾತರಂ' ಗೀತೆಯನ್ನು ಗೌರವದಿಂದ ಹಾಡಿಕೊಂಡು ಬರಲಾಗುತ್ತಿದ್ದು, ಎರಡು ಚರಣಗಳನ್ನು ಹಾಡುವ ಪರಿಪಾಠ ಮುಂದುವರಿದಿದೆ. ಗೀತೆಗೆ ಕಾಂಗ್ರೆಸ್‌ನ ಸಂಪೂರ್ಣ ಗೌರವವಿದ್ದು, ಹಾಡುವುದಕ್ಕೆ ಯಾವುದೇ ವಿರೋಧವಿಲ್ಲ ಎಂದರು.

ಚುನಾವಣೆ ವೇಳೆ ವಿವಾದ ಏಕೆ?

1977ರಲ್ಲಿ ಮೊರಾರ್ಜಿ ದೇಸಾಯಿ ನೇತೃತ್ವದ ಜನತಾ ಪಕ್ಷದ ಸರ್ಕಾರ ಅಧಿಕಾರದಲ್ಲಿದ್ದಾಗ ಆರು ಚರಣಗಳನ್ನು ಕಡ್ಡಾಯಗೊಳಿಸುವ ನಿಯಮ ಏಕೆ ತರಲಿಲ್ಲ? ಅಟಲ್ ಬಿಹಾರಿ ವಾಜಪೇಯಿ ಪ್ರಧಾನಿಯಾಗಿದ್ದ ಅವಧಿಯಲ್ಲೂ ಎರಡು ಚರಣಗಳನ್ನೇ ಹಾಡಲಾಗುತ್ತಿತ್ತು. ಆಗ ಈ ವಿಚಾರ ಏಕೆ ಪ್ರಸ್ತಾಪವಾಗಲಿಲ್ಲ ಎಂದು ಖಾದರ್ ಪ್ರಶ್ನಿಸಿದರು.

ಪ್ರಧಾನಿ ನರೇಂದ್ರ ಮೋದಿ 2014ರಿಂದ ಅಧಿಕಾರದಲ್ಲಿದ್ದಾರೆ. ಇಷ್ಟು ವರ್ಷಗಳ ಆಡಳಿತದ ಬಳಿಕವೂ ಪ್ರಸ್ತಾಪವಾಗದ ಈ ವಿಚಾರ, ಚುನಾವಣೆಗಳು ಸಮೀಪಿಸುತ್ತಿದ್ದಂತೆ ಮುನ್ನೆಲೆಗೆ ಬರುತ್ತಿರುವುದು ರಾಜಕೀಯ ಲಾಭದ ಉದ್ದೇಶದಿಂದ ರೂಪಿಸಿರುವ ಹಿಡನ್ ಅಜೆಂಡಾದಂತೆ ಕಾಣುತ್ತಿದೆ ಎಂದು ಆರೋಪಿಸಿದರು.



**"20 ವರ್ಷ ಅಧಿಕಾರದಲ್ಲಿದ್ದಾಗ ನೆನಪಾಗದ ದೇಶಭಕ್ತಿ, ಚುನಾವಣೆ ಬಂದಾಗ ಏಕೆ ನೆನಪಾಗುತ್ತದೆ? ವಂದೇ ಮಾತರಂನ ಆರೂ ಚರಣಗಳನ್ನು ಹಾಡುವುದಕ್ಕೆ ನಮ್ಮ ಯಾವುದೇ ವಿರೋಧವಿಲ್ಲ. ಕೇಂದ್ರ ಸರ್ಕಾರದ ಅಧಿಕೃತ ಮಾರ್ಗಸೂಚಿ ಇದ್ದರೆ ಪೂರ್ಣ ಗೀತೆಯನ್ನೇ ಹಾಡಲು ನಾವು ಸಿದ್ಧ."–ಸಚಿವ ಯು.ಟಿ. ಖಾದರ್.**

ಕೇಂದ್ರದ ಮಾರ್ಗಸೂಚಿ ಪಾಲನೆ

ಕೇಂದ್ರ ಸರ್ಕಾರದ ಯಾವುದೇ ಅಧಿಕೃತ ಕಾರ್ಯಕ್ರಮಗಳಲ್ಲಿ 'ವಂದೇ ಮಾತರಂ'ನ ಆರೂ ಚರಣಗಳನ್ನು ಹಾಡುವ ಕುರಿತು ಮಾರ್ಗಸೂಚಿ ಇದ್ದರೆ, ಅದನ್ನು ಪೂರ್ಣ ಪ್ರಮಾಣದಲ್ಲಿ ಹಾಡಲು ರಾಜ್ಯ ಸರ್ಕಾರ ಸಿದ್ಧವಿದೆ ಎಂದು ಖಾದರ್ ಸ್ಪಷ್ಟಪಡಿಸಿದರು.

ಇತ್ತೀಚೆಗೆ ರಾಜ್ಯಪಾಲರ ಕಚೇರಿಯಲ್ಲಿ ನಡೆದ ಪ್ರಮಾಣವಚನ ಕಾರ್ಯಕ್ರಮದಲ್ಲಿಯೂ ಎಲ್ಲರೂ ಆರೂ ಚರಣಗಳನ್ನು ಹಾಡಿದ್ದಾರೆ. ಅದಕ್ಕೆ ಯಾರೂ ವಿರೋಧ ವ್ಯಕ್ತಪಡಿಸಿಲ್ಲ. ಕೇಂದ್ರದ ಕಾರ್ಯಕ್ರಮಗಳಲ್ಲಿ ಕೇಂದ್ರದ ನಿಯಮ ಹಾಗೂ ರಾಜ್ಯ ಸರ್ಕಾರದ ಕಾರ್ಯಕ್ರಮಗಳಲ್ಲಿ ರಾಜ್ಯ ಸರ್ಕಾರದ ಅಧಿಕೃತ ತೀರ್ಮಾನಕ್ಕೆ ಎಲ್ಲರೂ ಬದ್ಧರಾಗಿರಬೇಕು ಎಂದು ಅವರು ಹೇಳಿದರು.

# ಶಾಲಾ ಬ್ಯಾಗ್‌ಗಳಲ್ಲಿ 38 ಕೆಜಿ ಗಾಂಜಾ!

● ವಿಕ್ರಮ ವಾಹಿನಿ | ಪಾಟ್ನಾ

ವಿದ್ಯಾರ್ಥಿಗಳ ಶಾಲಾ ಬ್ಯಾಗ್‌ಗಳಲ್ಲಿ ಅಡಗಿಸಿ ಸಾಗಿಸಲಾಗುತ್ತಿದ್ದ 38 ಕೆಜಿ ಗಾಂಜಾವನ್ನು ಪೊಲೀಸರು ವಶಪಡಿಸಿಕೊಂಡಿದ್ದು, ಮೂವರು ಅಪ್ರಾಪ್ತರು ಸೇರಿದಂತೆ ಐವರನ್ನು ಬಂಧಿಸಿದ್ದಾರೆ.

ವೈಶಾಲಿ ಜಿಲ್ಲೆಯ ಭಗವಾನ್‌ಪುರ ಅಡ್ಡಾ ಚೌಕ್‌ನಲ್ಲಿ ಖಚಿತ ಮಾಹಿತಿ ಮೇರೆಗೆ ಪೊಲೀಸರು ಮುಜಫರ್‌ಪುರದಿಂದ ಪಾಟ್ನಾಕ್ಕೆ ತೆರಳುತ್ತಿದ್ದ ಬಸ್‌ನ್ನು ತಡೆದು ಪ್ರಯಾಣಿಕರನ್ನು ತಪಾಸಣೆ ನಡೆಸಿದರು. ಈ ವೇಳೆ ಅಪ್ರಾಪ್ತರ ಶಾಲಾ ಬ್ಯಾಗ್‌ಗಳಲ್ಲಿ ಅಡಗಿಸಿಟ್ಟಿದ್ದ ಗಾಂಜಾ ಪತ್ತೆಯಾಗಿದೆ.

ಭಗವಾನ್‌ಪುರ ಪೊಲೀಸರು ಹಾಗೂ ಮದ್ಯಪಾನ ನಿಷೇಧ ಇಲಾಖೆಯ ಜಂಟಿ ತಂಡ ಕಾರ್ಯಾಚರಣೆ ನಡೆಸಿದ್ದು, ಒಟ್ಟು 38 ಕೆಜಿ ಗಾಂಜಾವನ್ನು ವಶಪಡಿಸಿಕೊಂಡಿದೆ. ಇದರ ಮೌಲ್ಯ ಸುಮಾರು 4 ಲಕ್ಷ ಎಂದು ವೈಶಾಲಿ ಹಿರಿಯ ಪೊಲೀಸ್ ಅಧೀಕ್ಷಕ ಶುಭಾಂಕ್ ಮಿಶ್ರಾ ತಿಳಿಸಿದ್ದಾರೆ.

'ಆಪರೇಷನ್ ನೀಲಕಂಠ'ದಡಿ ಐವರನ್ನು ವಶಕ್ಕೆ ಪಡೆದು ಕಾನೂನು ಕ್ರಮ ಕೈಗೊಳ್ಳಲಾಗಿದೆ. ಪಾಟ್ನಾಕ್ಕೆ ಮಾದಕ ವಸ್ತು ಪೂರೈಸುವ ಉದ್ದೇಶದಿಂದ ಆರೋಪಿಗಳು ಪ್ರಯಾಣಿಸುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಬಸ್‌ನಲ್ಲಿದ್ದ ಇತರ ಪ್ರಯಾಣಿಕರು ಹಾಗೂ ಗಾಂಜಾ ಸಾಗಣೆಯ ಹಿಂದಿರುವ ಜಾಲದ ಕುರಿತು ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ. ಅಪ್ರಾಪ್ತರನ್ನು ಈ ಅಕ್ರಮ ಸಾಗಣೆಯಲ್ಲಿ ಬಳಸಿಕೊಂಡಿರುವ ಬಗ್ಗೆ ವಿಶೇಷವಾಗಿ ತನಿಖೆ ನಡೆಸಲಾಗುತ್ತಿದೆ.

ಬಂಧಿತರಲ್ಲಿ ಮೂವರು ಅಪ್ರಾಪ್ತರಾಗಿರುವುದು ಪ್ರಕರಣದಲ್ಲಿ ಆತಂಕಕ್ಕೆ ಕಾರಣವಾಗಿದ್ದು, ಗಾಂಜಾ ಕಳ್ಳಸಾಗಣೆಗೆ ಅಪ್ರಾಪ್ತರನ್ನು ಬಳಸಿಕೊಂಡಿರುವ ಕುರಿತು ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

# ದಲಿತರ ಕಾಲೋನಿಯಲ್ಲಿ ಪೇಜಾವರ ಶ್ರೀಗಳ ಸಂಚಾರ



● ವಿಕ್ರಮ ವಾಹಿನಿ | ನವದೆಹಲಿ

ಚಾತುರ್ಮಾಸ್ಯ ವ್ರತದ ಅಂಗವಾಗಿ ಪೇಜಾವರ ಶ್ರೀ ವಿಶ್ವಪ್ರಸನ್ನತೀರ್ಥ ಸ್ವಾಮೀಜಿ ಅವರು ಭಾನುವಾರ ವಸಂತಕುಂಜ್‌ನ ರಂಗಪುರಿ ಪಹಾಡಿ ಕಾಲೋನಿಗೆ ಭೇಟಿ ನೀಡಿ, ಅಲ್ಲಿನ ನಿವಾಸಿಗಳೊಂದಿಗೆ ಸಂವಾದ ನಡೆಸಿದರು.

ದಲಿತ ಹಾಗೂ ಹಿಂದುಳಿದ ವರ್ಗಗಳ ಕಾಲೋನಿ ಭೇಟಿ ಅಭಿಯಾನದ ಭಾಗವಾಗಿ ಶ್ರೀಗಳು ಸುಮಾರು 500ಕ್ಕೂ ಅಧಿಕ ಜೋಪಡಿಗಳಿರುವ ಬಡಾವಣೆಗೆ ಭೇಟಿ ನೀಡಿದರು. ಸ್ಥಳೀಯ ವಿಶ್ವ ಹಿಂದೂ ಪರಿಷತ್, ಸೇವಾ ಭಾರತಿ ಸದಸ್ಯರು, ಸ್ಥಳೀಯ ಕಾರ್ಪೋರೇಟರ್ ಇಂದರ್‌ಜಿತ್ ಸೇರಾವತ್ ಹಾಗೂ ಕಾಲೋನಿ ಮುಖಂಡರು ಶ್ರೀಗಳನ್ನು ಸ್ವಾಗತಿಸಿದರು. ಈ ಸಂದರ್ಭದಲ್ಲಿ ಕೋಲಾರದ ರಮೇಶ್ ಉಪಸ್ಥಿತರಿದ್ದರು.

ಶ್ರೀಗಳು ಬಡಾವಣೆಯ ಮೂರು ಮನೆಗಳಿಗೆ ಭೇಟಿ ನೀಡಿ ಉಡುಪಿ ಶ್ರೀಕೃಷ್ಣ ಹಾಗೂ ಅಯೋಧ್ಯೆಯ ರಾಮನ ಚಿತ್ರವಿಟ್ಟು ರಾಮದೀಪ ಬೆಳಗಿಸಿದರು. ಮನೆ ಮಂದಿಗೆ ರಾಮಮಂತ್ರ ಬೋಧಿಸಿ ಪ್ರಸಾದ ವಿತರಿಸಿದ ಅವರು, ನಿವಾಸಿಗಳ ಕುಂದುಕೊರತೆ ಹಾಗೂ ಸಮಸ್ಯೆಗಳ ಬಗ್ಗೆ ವಿಚಾರಿಸಿದರು.

ಬಳಿಕ ಬಡಾವಣೆಯ ಶಿವಮಂದಿರಕ್ಕೆ ಭೇಟಿ ನೀಡಿ ಮಂಗಳಾರತಿ ನೆರವೇರಿಸಿದ ಶ್ರೀಗಳು, ಅಲ್ಲಿದ್ದ ನೂರಾರು ಭಕ್ತರಿಗೆ ರಾಮಮಂತ್ರ ಬೋಧಿಸಿದರು. ಸ್ಥಳೀಯರೊಂದಿಗೆ ರಾಮಭಜನೆಯಲ್ಲೂ ಪಾಲ್ಗೊಂಡರು. ಶ್ರೀ ಸಂಸ್ಥಾನದ ವತಿಯಿಂದ ಬಡಾವಣೆಯ ಮನೆಗಳಿಗೆ ರಾಮ–ಕೃಷ್ಣರ ಚಿತ್ರ ಹಾಗೂ ಪ್ರಸಾದ ವಿತರಿಸಲಾಯಿತು.

**ಉತ್ತಮ ನಾಗರಿಕರಾಗಿ ಬಾಳಲು ಕರೆ**

ಈ ಸಂದರ್ಭದಲ್ಲಿ ಮಾತನಾಡಿದ ಪೇಜಾವರ ಶ್ರೀಗಳು, ಜೀವನದುದ್ದಕ್ಕೂ ದೇವರ ಮೇಲಿನ ಭಕ್ತಿ ಹಾಗೂ ಕರ್ತವ್ಯಗಳ ಬಗ್ಗೆ ನಿಷ್ಠೆ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು. ಶುದ್ಧಾಹಾರ ಸೇವನೆ, ವ್ಯಸನಮುಕ್ತ ಜೀವನ, ಮನೆ ಹಾಗೂ ಬಡಾವಣೆಯ ಸ್ವಚ್ಛತೆ, ಮಕ್ಕಳಿಗೆ ಉತ್ತಮ ಸಂಸ್ಕಾರ ಮತ್ತು ಶಿಕ್ಷಣ ಹಾಗೂ ಆರೋಗ್ಯದ ಬಗ್ಗೆ ಕಾಳಜಿ ವಹಿಸುವುದರಿಂದ ಶುದ್ಧ ಮನಸ್ಸು ರೂಪುಗೊಳ್ಳುತ್ತದೆ ಎಂದರು.

ಉತ್ತಮ ಕಾರ್ಯಗಳ ಮೂಲಕ ಸಮಾಜದಲ್ಲಿ ಜವಾಬ್ದಾರಿಯುತ ನಾಗರಿಕರಾಗಿ ಬದುಕುವುದೇ ದೇಶವನ್ನು ರಾಮರಾಜ್ಯದತ್ತ ಕೊಂಡೊಯ್ಯುವ ಮಾರ್ಗವಾಗಿದೆ ಎಂದು ಹೇಳಿದರು. ಕಾಲೋನಿ ನಿವಾಸಿಗಳ ಸ್ಥಳೀಯ ಸಮಸ್ಯೆಗಳನ್ನು ಆಲಿಸಿದ ಶ್ರೀಗಳು, ಅವುಗಳನ್ನು ಸರ್ಕಾರದ ಗಮನಕ್ಕೆ ತಂದು ಪರಿಹಾರಕ್ಕೆ ಪ್ರಯತ್ನಿಸುವುದಾಗಿ ತಿಳಿಸಿದರು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 164,